# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 25 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–07–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 25 | Title- Code: KARKAN 28269 | Chitradurga | Date: 28-07-2023 Friday | Page: 4 | Price: Rs. 2-00

**ಒಳಪುಟದ ಸುದ್ದಿಗಳು**

ಮಣಿಪುರ ಗಲಭೆ ನಿಯಂತ್ರಿಸುವಲ್ಲಿ 2 ಸರ್ಕಾರಗಳು ವಿಫಲ: ಪ್ರತಿಭಟನೆ 2

ಕೇಂದ್ರ ಸಚಿವ ನಿತಿನ್ ಗಡ್ಕರಿಯನ್ನು ಭೇಟಿಯಾದ ಸಚಿವ ಸತೀಶ್ ಜಾರಕಿಹೊಳಿ 3

ನೇತ್ರ ಜ್ಯೋತಿ ಕಾಲೇಜಿನ ಘಟನೆ ಖಂಡನೆ, ತಪ್ಪಿತಸ್ಥರ ಮೇಲೆ ಕಠಿಣ ಕ್ರಮಕ್ಕೆ ಒತ್ತಾಯ 4

**ಫಾಸ್ಟ್ ನ್ಯೂಸ್**

## ಬಿಜೆಪಿ ಕಾರ್ಯಕರ್ತರಿಂದ ಪರಮೇಶ್ವರ್ ಮನೆಗೆ ನುಗ್ಗಲು ಯತ್ನ

» **ಬೆಂಗಳೂರು**

ಉಡುಪಿ ಕಾಲೇಜು ವಿದ್ಯಾರ್ಥಿನಿಯರ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು(ಜು.27) ಬಿಜೆಪಿ ಯುವ ಮೋರ್ಚಾ ಪ್ರತಿಭಟನೆ ನಡೆಸುತ್ತಿದ್ದು. ಇದೀಗ ಗೃಹ ಸಚಿವ ಪರಮೇಶ್ವರ್ ಮನೆಗೆ ನುಗ್ಗಲು ಯತ್ನಿಸಿದ್ದಾರೆ. ಈ ಹಿನ್ನಲೆ ಬಿಜೆಪಿ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆಯಲಾಗಿದೆ.

## ಚಿಕ್ಕಮಗಳೂರಿನಲ್ಲಿ ಧಾರಾಕಾರ ಮಳೆ; ಕೃಷಿ ಜಮೀನು ಜಲಾವೃತ

» **ಚಿಕ್ಕಮಗಳೂರು**

ಪಶ್ಚಿಮ ಘಟ್ಟಗಳ ಸಾಲಿನಲ್ಲಿ ಧಾರಾಕಾರ ಮಳೆ ಹಿನ್ನಲೆ ಜಿಲ್ಲೆಯ ಸಿದ್ರಳ್ಳಿ, ಎಮ್ಮೆದೊಡ್ಡಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮದಲ್ಲಿ ನೆರೆ ಆತಂಕ ಎದುರಾಗಿದೆ. ಈ ಹಿನ್ನಲೆ ಸಾವಿರಾರು ಎಕರೆಗೂ ಅಧಿಕ ಕೃಷಿ ಜಮೀನು ಜಲಾವೃತವಾಗಿದ್ದು, ಆಲೂಗಡ್ಡೆ, ಶುಂಠಿ, ಟೊಮ್ಯಾಟೊ, ತೆಂಗಿನ ತೋಟಗಳು ಮುಳುಗಡೆಯಾಗಿದೆ.

## ಅಥಣಿಯಲ್ಲಿ ಮಳೆಯಿಂದ ಮನೆಗೋಡೆ ಕುಸಿದು ಯುವಕ ದುರ್ಮರಣ

» **ಬೆಳಗಾವಿ**

ಜಿಲ್ಲೆಯ ಅಥಣಿಯಲ್ಲಿ ಧಾರಾಕಾರ ಮಳೆ ಸುರಿಯುತ್ತಿದ್ದು, ಮಳೆಯಿಂದ ಮನೆಗೋಡೆ ಕುಸಿದು 23 ವರ್ಷದ ಕಾಶಿನಾಥ್ ಸುತಾರ್ ಎಂಬ ಯುವಕ ಸಾವನ್ನಪ್ಪಿದ ಘಟನೆ ನಡೆದಿದೆ. ನಿರಂತರ ಮಳೆಗೆ ಮನೆ ಗೋಡೆ ನೆನೆದು ಈ ಅವಘಡ ಸಂಭವಿಸಿದ್ದು, ಪೋಷಕರ ಆಕ್ರಂದನ ಮುಗಿಲುಮುಟ್ಟಿದೆ. ಸ್ಥಳಕ್ಕೆ ಅಥಣಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಇಂದು ದಕ್ಷಿಣ ಕನ್ನಡ ಜಿಲ್ಲೆಗೆ ರೆಡ್ ಅಲರ್ಟ್ ಘೋಷಿಸಿದ ಹವಾಮಾನ ಇಲಾಖೆ

» **ದಕ್ಷಿಣ ಕನ್ನಡ**

ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆಯಿದ್ದು, ಹವಾಮಾನ ಇಲಾಖೆ ಇಂದು ರೆಡ್ ಅಲರ್ಟ್ ಘೋಷಿಸಿದೆ. ಈ ಹಿನ್ನಲೆ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್ ಜಿಲ್ಲೆಯ ಶಾಲೆಗಳಿಗೆ ಇಂದು ರಜೆ ಘೋಷಣೆ ಮಾಡಿದ್ದಾರೆ.

# ಇನ್ನು ಎರಡು ದಿನಗಳ ಕಾಲ ಮಳೆ ಆರ್ಭಟ

» **ಬೆಂಗಳೂರು**

ರಾಜ್ಯದ ಹಲವೆಡೆ ಕಳೆದೊಂದು ವಾರದಿಂದ ಸುರಿಯುತ್ತಿರುವ ಇನ್ನು ಎರಡು ದಿನ ಮುಂದುವರಿಯುವ ಕುರಿತು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಹಾವೇರಿ, ರಾಯಚೂರು, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಇಂದು ಕೂಡ ಶಾಲಾ, ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಬೆಳಗಾವಿಯಲ್ಲಿ ಸತತ ಮಳೆಯಿಂದಾಗಿ ಇಂದು ಮುಂಜಾನೆ ಗೋಡೆ ಕುಸಿದು ಯುವಕ ಸಾವನ್ನಪ್ಪಿದ್ದಾನೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಕಾವೇರಿ ಜಲಾನಯನ ಪ್ರದೇಶ ಸೇರಿದಂತೆ ಮಲೆನಾಡು, ಉತ್ತರ ಕರ್ನಾಟಕದಲ್ಲಿ ಮಳೆ ಆರ್ಭಟ ಮುಂದುವರಿದಿದ್ದು, ಜನಜೀವನ ಏರುಪೇರಾಗಿದೆ. ಮಳೆಯಿಂದಾಗಿ ನದಿ ಹಳ್ಳಕೊಳ್ಳಗಳು ಉಕ್ಕಿ ಹರಿಯುತ್ತಿದೆ.ರಾಜ್ಯದ ಹಲವೆಡೆ ಮಳೆ ಮುಂದುವರಿಯುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಮುನ್ನೆಚ್ಚರಿಕೆ ಕ್ರಮವನ್ನು ಜಿಲ್ಲಾಡಳಿತ ಕೈಗೊಂಡಿದೆ. ಹಾವೇರಿ ಜಿಲ್ಲೆಯಲ್ಲಿ ಮಳೆ ಸುರಿಯುತ್ತಿದ್ದು, ಅಂಗನವಾಡಿ, ಪ್ರಾಥಮಿಕ



ಪ್ರೌಢಶಾಲೆಗಳು ಮತ್ತು ಪಿಯು ಕಾಲೇಜುಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ.ವರುನ ಅರ್ಭಟಕ್ಕೆ ಮನೆಯ ಗೋಡೆ ಕುಸಿದು ಬಿದ್ದಿದ್ದು, ಮನೆಯಲ್ಲಿದ್ದವರು ಪ್ರಾಣಾಪಾರಾಗಿದ್ದಾರೆ. ಹಾವೇರಿ ಜಿಲ್ಲೆಯ ಸವಣೂರು ತಾಲ್ಲೂಕಿನ ಹೂವಿನಶಿಗ್ಲಾಳಿ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ನಿರಂತರ ಮಳೆಗೆ ಗೋಡೆ ಹೊದ್ದೆಯಾಗಿದೆ ಏಕಾಏಕಿ ಕುಸಿದು ಬಿದ್ದಿದೆ. ಮನೆ ಮಠ ಕಳೆದು ಕೊಂಡು ಕುಟುಂಬ ಸದಸ್ಯರು ನಿಗರ್ತಿಕರಾಗಿದ್ದಾರೆ.

ರಾಯಚೂರು ಜಿಲ್ಲೆಯಲ್ಲೂ ಮಳೆ ಸುರಿಯುತ್ತಿದ್ದು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಶಾಲಾ, ಕಾಲೇಜುಗಳಿಗೆ ಹಾಗೂ ಅಂಗನವಾಡಿ ಕೇಂದ್ರಗಳಿಗೆ ರಜೆ ಘೋಷಿಸಿದ್ದಾರೆ. ಮತ್ತೊಂದೆಡೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುರಿಯುತ್ತಿದ್ದ ಮಳೆ ಕೊಂಚ ಬಿಡುವು ನೀಡಿದೆ. ಜಿಲ್ಲೆಯಲ್ಲಿ ತಣ್ಣನೆ ವಾತಾವರಣ ನಿರ್ಮಾಣವಾಗಿದ್ದು ಚಳಿಗೆ ನಡುಗುವಂತಾಗಿದೆ. ಭಾರೀ ಮಳೆಯಿಂದಾಗಿ 12 ಮನೆಗಳಿಗೆ ಹಾನಿ ಸಂಭವಿಸಿದೆ. ಮನೆ ಕಳೆದುಕೊಂಡವರಿಗೆ ತಾತ್ಕಾಲಿಕ ಶಿಬಿರಗಳಲ್ಲಿ ಆಸರೆ ಕಲ್ಪಿಸಲಾಗಿದೆ. ಮಳೆ ಬೀಳುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ಹಿನ್ನೆಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ.

ಬೆಳಗಾವಿ ಜಿಲ್ಲೆಯ ಅಥಣಿಯಲ್ಲಿ ಮನೆ ಗೋಡೆ ಕುಸಿದು ಕಾಶಿನಾಥ ಅಪ್ಪ ಸಾಬಾ ಸುತಾರಾ ಮೃತಪಟ್ಟಿದ್ದಾರೆ. ಘಟನಾ ಸ್ಥಳಕ್ಕೆ ಹಿರಿಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಚಿಕ್ಕಮಗಳೂರು ಜಿಲ್ಲೆಯಲ್ಲೂ ಧಾರಾಕಾರ ಮಳೆ ಹಿನ್ನೆಲೆಯಲ್ಲಿ ಕೆಲವು ಭಾಗಗಳಲ್ಲಿ ನೆರೆ ಪರಿಸ್ಥಿತಿ ಉಂಟಾಗಿದೆ. ಸಾವಿರಾರು ಎಕರೆ ಕೃಷಿ ಭೂಮಿ ಜಲಾವೃತಗೊಂಡಿದೆ. ಆಲೂಗೆಡ್ಡೆ, ಶುಂಠಿ, ಟೊಮೊಟೊ ಹಾಗೂ ತೆಂಗಿನ ತೋಟಗಳು ಜಲಾವೃತಗೊಂಡಿವೆ.

## ಹುಲಿಗಳ ಸಂಖ್ಯೆಯಲ್ಲಿ ಹೆಚ್ಚಳ: ಸಚಿವ ಖಂಡ್ರೆ



» **ಬೆಂಗಳೂರು**

ರಾಜ್ಯದಲ್ಲಿ ಹುಲಿಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿದೆ ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರಖಂಡ್ರೆ ತಿಳಿಸಿದ್ದಾರೆ.

ಅಂತಾರಾಷ್ಟ್ರೀಯ ಹುಲಿ ದಿನಕ್ಕೆ ಎರಡು ದಿನಗಳ ಮುನ್ನ ಹುಲಿ ಗಣತಿಯ ವಿವರಗಳನ್ನು ಬಿಡುಗಡೆ ಮಾಡಿರುವ ಅವರು, 2018ರಲ್ಲಿ ನಡೆದಿದ್ದ ಅಖಿಲ ಭಾರತ ಹುಲಿ ಗಣತಿಯ ಸಂದರ್ಭದಲ್ಲಿ ಕ್ಯಾಮರಾ ಟ್ರಾಕ್‌ನಲ್ಲಿ 404 ಹುಲಿಗಳು ಪತ್ತೆಯಾಗಿದ್ದವು. ಇದನ್ನು ವನ್ಯಜೀವಿ ಸಂಖ್ಯಾಶಾಸ್ತ್ರದ ಪ್ರಕಾರ ವಿಶ್ಲೇಷಿಸಿದಾಗ ರಾಜ್ಯದಲ್ಲಿ 475 ರಿಂದ 573 ಹುಲಿಗಳು ಇರಬಹುದು ಎಂದು ವಿಶ್ಲೇಷಿಸಲಾಗಿತ್ತು.2022ರಲ್ಲಿ ರಾಜ್ಯದಲ್ಲಿ 435 ಹುಲಿಗಳು ಪತ್ತೆಯಾಗಿದ್ದು, ಈ ವರ್ಷ ಹುಲಿಗಳ ಸಂಖ್ಯೆ ಇನ್ನೂ ಹೆಚ್ಚು ಆಗಬಹುದು. ಈ ಬಗ್ಗೆ ವಿಶ್ಲೇಷಣೆ ನಡೆದಿದೆ. ನಂತರ ಹುಲಿ ಸಂಖ್ಯೆ ಎಷ್ಟು ಹೆಚ್ಚು ಆಗಿದೆ ಎಂಬುದು ಗೊತ್ತಾಗಲಿದೆ ಎಂದರು.ಹುಲಿ ಸಂರಕ್ಷಣೆಗೆ ರಾಜ್ಯಸರ್ಕಾರ ಕೈಗೊಂಡ ಉಪಕ್ರಮಗಳಿಂದ ಹುಲಿಗಳ ಸಂಖ್ಯೆ ಹೆಚ್ಚಾಗಿದೆ ಎಂದವರು ಹೇಳಿದರು.ಮಾರ್ಗಸೂಚಿಯ ಪ್ರಕಾರ ಪ್ರತಿ 4 ವರ್ಷಗಳಿಗೊಮ್ಮೆ ಹುಲಿಗಣತಿ ಮಾಡಲಾಗುತ್ತದೆ. ಪಶ್ಚಿಮಘಟ್ಟ ಹೆಚ್ಚಿನ ಭಾಗ ಹೊಂದಿರುವ ಕರ್ನಾಟಕವೂ ಹುಲಿಗಳ ಸಂರಕ್ಷಣೆಯಲ್ಲಿ ಮುಂಚೂಣಿಯಲ್ಲಿದೆ. 2021–22ರ ಅವಧಿಯಲ್ಲಿ ಹುಲಿ ಹಣತಿಯನ್ನು ವೈಜ್ಞಾನಿಕವಾಗಿ ಸಮರ್ಪಕವಾಗಿ ನಡೆಸಿದೆ. ರಾಜ್ಯದ 5 ಹುಲಿ ಸಂರಕ್ಷಿತ ಪ್ರದೇಶಗಳಾದ ನಾಗರಹೊಳೆ, ಬಂಡೀಪುರ, ಭದ್ರ, ಬಿಳಿಗಿರಿರಂಗನಾಥ ಸ್ವಾಮಿ ದೇವಾಲಯ, ಕಾಳಿಕಾನನ ಸೇರಿದಂತೆ ಒಟ್ಟು 37 ವನ್ಯಜೀವಿ ಧಾಮಗಳಲ್ಲಿ ಹುಲಿ ಗಣತಿ ನಡೆಸಲಾಗಿದೆ.

ಪುಟ 3

## ರಾಜ್ಯ ಸರ್ಕಾರದಿಂದ ಅತಿವೃಷ್ಟಿ, ಪ್ರವಾಹ ಹಾನಿ ಪರಿಹಾರ ಹೆಚ್ಚಳ ಮಾಡಿ ಆದೇಶ

» **ಬೆಂಗಳೂರು**

ರಾಜ್ಯ ಸರ್ಕಾರದಿಂದ ಮಳೆಯಿಂದ ಉಂಟಾದಂತ ಅತಿವೃಷ್ಟಿ ಹಾಗೂ ಪ್ರವಾಹದಂತ ಹಾನಿಗೆ ನೀಡಲಾಗುತ್ತಿದ್ದಂತ ಪರಿಹಾರದ ಮೊತ್ತವನ್ನು ಹೆಚ್ಚಳ ಮಾಡಿ ಆದೇಶಿಸಲಾಗಿದೆ.

ಈ ಸಂಬಂಧ ಪರಿಷ್ಕೃತ ದರವನ್ನು ಜಾರಿ ಮಾಡಿ ಸರ್ಕಾರ ಆದೇಶಿಸಿದ್ದು, 2023–24ನೇ ಸಾಲಿನಲ್ಲಿ ಅತಿವೃಷ್ಟಿ/ ಪ್ರವಾಹದಿಂದ ಹಾನಿಯಾದ ಬೆಳೆಗಳಿಗೆ ನೀಡುವ ಇನ್‌ಪುಟ್ ಸಬ್ಸಿಡಿ ಪರಿಷ್ಕರಿಸಿ ಆದೇಶ ಹೊರಡಿಸಿದೆ.

ಪ್ರತಿವರ್ಷ ಮುಂಗಾರು ಹಾಗೂ ಹಿಂಗಾರು ಋತುವಿನಲ್ಲಿ ಭಾರಿ ಮಳೆಯಿಂದ ಹಾಗೂ ನದಿ ಹರಿವಿನಿಂದ ಉಂಟಾಗುವ ಪ್ರವಾಹದಿಂದ ಜನ–ಜಾನುವಾರು, ಮನೆ, ಬೆಳೆ ಹಾಗೂ ಸಾರ್ವಜನಿಕ ಮೂಲ ಸೌಕರ್ಯಗಳ ಹಾನಿ ಆಗುತ್ತದೆ ಎಂದಿದೆ.

ಪ್ರತಿ ವರ್ಷ ಬೆಳೆ ಹಾನಿ ಆಗುವ ಪ್ರಕರಣಗಳಿಗೆ ಎಸ್‌ಡಿಆರ್‌ಎಫ್/ಎನ್‌ಡಿಆರ್‌ಎಫ್ ಮಾರ್ಗಸೂಚಿಗಳಂತೆ ಅರ್ಹ ಪ್ರಕರಣಗಳಿಗೆ ಮಾತ್ರ ಪರಿಷ್ಕೃತ ದರದಲ್ಲಿ ಪರಿಹಾರ ಪಾವತಿಸಲಾಗುತ್ತಿದೆ. 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಪ್ರವಾಹ ಅತಿವೃಷ್ಟಿಯಿಂದ ಉಂಟಾದ ಬೆಳೆ ಹಾನಿಗೆ ಕಳೆದ ಸಾಲಿನಲ್ಲಿ ಕೇಂದ್ರ ಸರ್ಕಾರದ ಎಸ್‌ಡಿಆರ್‌ಎಫ್ / ಎನ್‌ಡಿಆ ಎಫ್ ಮಾರ್ಗಸೂಚಿಯಲ್ಲಿ ನಿಗದಿಪಡಿಸಿರುವ ದರಕ್ಕಿಂತ ಹೆಚ್ಚುವರಿ ಪರಿಷ್ಕೃತ ದರದಲ್ಲಿ ನೀಡಿರುವ ಪರಿಹಾರದಂತೆ ಬೆಳೆ ಹಾನಿಯಾದ ರೈತರಿಗೆ ಹೆಚ್ಚಿನ ಆರ್ಥಿಕ ನೆರವು ನೀಡಲು ಇನ್‌ಪುಟ್ ಸಬ್ಸಿಡಿ ಮೊತ್ತವನ್ನು ಗರಿಷ್ಠ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ ಪರಿಷ್ಕೃತ ದರದಲ್ಲಿ ಪಾವತಿಸಲು ಸರ್ಕಾರ ಮಂಜೂರಾತಿ ನೀಡಿ ಆದೇಶಿಸಿದೆ.

ಮಳೆಯಾಶ್ರಿತ ಬೆಳೆಗಳಿಗೆ ಮಾರ್ಗಸೂಚಿ ದರ 8,500 ರೂ. ಇದ್ದು ಅದನ್ನು 13,600 ರೂ.ಗೆ ನೀರಾವರಿ ಬೆಳೆಗಳಿಗೆ 17,000 ರೂ.ಗಳಿಂದ 22,500 ರೂ.ಗಳಿಗೆ ಹಾಗೂ ಬಹುವಾರ್ಷಿಕ ಬೆಳೆಗಳಿಗೆ 22,000 ರೂ.ಗಳಿಂದ 28000 ರೂ.ಗೆ ಪರಿಷ್ಕರಿಸಿ, ಆದೇಶ ಹೊರಡಿಸಿದೆ.

## ಮೋದಿಗೆ ವೈಎಸ್‌ಆರ್ ಬೆಂಬಲ

» **ಹೊಸದಿಲ್ಲಿ**

ಎನ್ ಡಿಎ ಯಿಂದ ಅಂತರ ಕಾಯ್ದುಕೊಂಡಿದ್ದ ವೈಎಸ್ ಆರ್ ಕಾಂಗ್ರೆಸ್ ಪಕ್ಷ ಮತ್ತೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರಕ್ಕೆ ಬೆಂಬಲ ನೀಡಲು ನಿರ್ಧರಿಸಿದೆ ಎಂದು ವರದಿಯಾಗಿದೆ.

ಆಂಧ್ರಪ್ರದೇಶ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ನೇತೃತ್ವದವೈಎಸ್ ಆರ್ ಕಾಂಗ್ರೆಸ್ ಪಕ್ಷ ಬಿಜೆಪಿಯನ್ನು ಬೆಂಬಲಿಸಲಿದೆ.ಈ ಮೂಲಕ ಕಾಂಗ್ರೆಸ್ ನೇತೃತ್ವದ ವಿಪಕ್ಷಗಳು ಮಣಿಪುರ ಹಿಂಸಾಚಾರದ ವಿರುದ್ಧ ಕೇಂದ್ರ ಸರಕಾರದ ವಿರುದ್ಧ ಮಂಡಿಸಿರುವ ಅವಿಶ್ವಾಸ ನಿರ್ಣಯದ ವಿರುದ್ಧ ತನ್ನ ಮತ ಚಲಾಯಿಸಲಿದೆ ಎಂದು ವೈಎಸ್ ಆರ್ ಕಾಂಗ್ರೆಸ್ ಉನ್ನತ ಮೂಲಗಳು ತಿಳಿಸಿವೆ ಎಂದು ಓಆಖಿಗಿ ವರದಿ ಮಾಡಿದೆ.ಬಿಜೆಪಿ ಮಂಡಿಸುವ ಮಸೂದೆಗಳಿಗೂ ಲೋಕಸಭೆ ಹಾಗೂ ರಾಜ್ಯಸಭೆಯಲ್ಲಿ ನಮ್ಮ ಪಕ್ಷ ಬೆಂಬಲ ನೀಡಲಿದೆ ಎಂದು ವೈಎಸ್ ಆರ್ ಕಾಂಗ್ರೆಸ್ ಪಕ್ಷದ ರಾಜ್ಯಸಭೆಯ ನಾಯಕ ವಿ.ವಿಜಯಸಾಯಿರೆಡ್ಡಿ ಹೇಳಿದ್ದಾರೆ.

ದಿಲ್ಲಿಯ ಸೇವಾ ವಿಷಯಗಳ ಆಡಳಿತಾತ್ಮಕ ನಿಯಂತ್ರಣ ಮಸೂದೆ ಸೇರಿದಂತೆ ವಿವಿಧ ಮಸೂದೆಗಳಿಗೂ ವೈಎಸ್ ಆರ್ ಕಾಂಗ್ರೆಸ್ ಬೆಂಬಲ ನೀಡಲಿದೆ ಎಂದು ಮೂಲಗಳು ತಿಳಿಸಿವೆ.




**ಪ್ರಮುಖ ಸುದ್ದಿ**

# ರೈತರಿಂದ ಬಲವಂತವಾಗಿ ಸಾಲ ವಸೂಲಿ ಮಾಡುವಂತಿಲ್ಲ ಸಿಎಂ ಸಿದ್ದು ಖಡಕ್ ಸೂಚನೆ

» **ಬೆಂಗಳೂರು**

ಗ್ರಾಮ ಲೆಕ್ಕಿಗರಿಂದ ಹಿಡಿದು ಜಿಲ್ಲಾಧಿಕಾರಿವರೆಗಿನ ಸಂಬಂಧಪಟ್ಟ ಅಧಿಕಾರಿಗಳೆಲ್ಲ ಕಾರ್ಯಸ್ಥಾನಗಳಲ್ಲೇ ಇರಬೇಕು. ನಿಮಗೆ ಬಿಡುವಾದಾಗ ಜನರಿಗೆ ಸಿಗುವುದಲ್ಲ; ಜನರ ಸಮಯಕ್ಕೆ ನೀವು ಲಭ್ಯ ವಾಗಬೇಕು. ಈ ಹಿನ್ನೆಲೆಯಲ್ಲಿ ತಮ್ಮ ಲಭ್ಯತೆ ಮತ್ತು ಸಂಪರ್ಕ ಸಂಖ್ಯೆ ಸಹಿತ ಮಾಹಿತಿ ಪುಸ್ತಕ ಪ್ರಕಟಿಸಿ ಸ್ಥಳೀಯರಿಗೆ ವಿತರಿಸಬೇಕು.

ಜತೆಗೆ ರೈತರಿಂದ ಬಲವಂತವಾಗಿ ಸಾಲ ವಸೂಲಿ ಮಾಡುವವರ ವಿರುದ್ಧ ಪೊಲೀಸ್ ನೆರವಿನೊಂದಿಗೆ ಕ್ರಮ ಕೈಗೊಳ್ಳಬೇಕು

ಇದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ನೀಡಿದ



ಖಡಕ್ ಸೂಚನೆ.

ಗೃಹ ಕಚೇರಿ "ಕೃಷ್ಣಾ"ದಲ್ಲಿ ಬುಧವಾರ ರಾಜ್ಯದ ಹವಾಮಾನ ಮತ್ತು ಮಳೆ–ಬೆಳೆಯ ಸ್ಥಿತಿಗತಿಗಳ ಕುರಿತು ಎಲ್ಲ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣ ಅಧಿಕಾರಿಗಳೊಂದಿಗೆ ನಡೆಸಿದ ವೀಡಿಯೋ ಸಂವಾದದಲ್ಲಿ ಅವರು ಈ ಸೂಚನೆ ನೀಡಿದರು.

ರಾಜ್ಯಾದ್ಯಂತ ಧಾರಾಕಾರವಾಗಿ ಸುರಿಯು ತ್ತಿರುವ ಮಳೆಯಿಂದ ಹಲವೆಡೆ ಅವಾಂತರ ಸೃಷ್ಟಿಯಾಗಿದೆ. ಇನ್ನೂ ಒಂದು ವಾರ ಭಾರೀ ಮಳೆಯ ಮುನ್ಸೂಚನೆ ಇದೆ. ಹಾಗಾಗಿ ಪಂಚಾ ಯತ್ ಅಭಿವೃದ್ಧಿ ಅಧಿಕಾರಿ (ಪಿಡಿಒ), ಗ್ರಾಮ ಲೆಕ್ಕಿಗ, ತಹಶೀಲ್ದಾರ್,ಜಿಲ್ಲಾ ಮಟ್ಟದ ಅಧಿಕಾರಿಗಳು ಸಹಿತ ಎಲ್ಲರೂ ತಮ್ಮ ಕಾರ್ಯಸ್ಥಾನಗಳಲ್ಲೇ ಇರಬೇಕು. ಸಕಾಲದಲ್ಲಿ ಜನರಿಗೆ ಸುಲಭವಾಗಿ ಸಿಗುವುದರ ಜತೆಗೆ ಅವರ ಸಮಸ್ಯೆಗಳಿಗೆ ಸ್ಪಂದಿಸ ಬೇಕು ಎಂದು ಸಿಎಂ ನಿರ್ದೇ ಶಿಸಿದರು.

ಡಿ.ಕೆ. ಶಿವಕುಮಾರ್ ಮಾತನಾಡಿ, ರಾಮನಗರದಲ್ಲಿ ಅಧಿಕಾರಿಗಳಿಗೆ ಕಾರ್ಯಸ್ಥಾನ ಬಿಡ ದಂತೆ ಸೂಚನೆ ನೀಡಲಾಗಿದೆ. ಅಲ್ಲದೆ, ಇನ್ನೂ ಒಂದು ಹೆಜ್ಜೆ ಮುಂದೆಹೋಗಿ ಪಂಚಾಯತ್‌ನಿಂದ ಜಿಲ್ಲಾಮಟ್ಟದವರೆಗಿನ ಎಲ್ಲ ಅಧಿಕಾರಿಗಳ ಮಾಹಿತಿಯನ್ನು ಒಳಗೊಂಡ ಪುಸ್ತಕ ಪ್ರಕಟಿಸಿ ಸ್ಥಳೀಯವಾಗಿ ವಿತರಿಸಲಾಗುತ್ತಿದೆ. ಇದೇ ಮಾದರಿಯನ್ನು ರಾಜ್ಯದ ಇತರ ಜಿಲ್ಲೆಗಳೂ ಅನುಸರಿಸಬೇಕು ಎಂದು ಹೇಳಿದ್ದು, ಇದಕ್ಕೆ ಮುಖ್ಯಮಂತ್ರಿಗಳೂ ದನಿಗೂಡಿಸಿದರು.

**ಮುನ್ನೆಚ್ಚರಿಕೆ ವಹಿಸಿ:** ಭೂಕುಸಿತ ಆಗಬಹುದಾದ ಸ್ಥಳಗಳ ಬಗ್ಗೆ ಒಂದು ಹಂತಕ್ಕೆ ಅಧಿಕಾರಿಗಳಿಗೆ ಮೊದಲೇ ಮಾಹಿತಿ ಇರುತ್ತದೆ. ಪೊಲೀಸ್, ಕಂದಾಯ, ನೀರಾವರಿ, ಗ್ರಾಮೀಣಾಭಿವೃದ್ಧಿ ಇಲಾಖೆಗಳ ಮಧ್ಯೆ ಸಮನ್ವಯವಿದ್ದರೆ ಸಾಕಷ್ಟು ಜೀವಹಾನಿ ತಪ್ಪಿಸಬಹುದು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |



| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |



## ಫಾಸ್ಟ್ ನ್ಯೂಸ್

### ಎಚ್.ಅಶ್ವಿನಿ ಲೋಹಿತ್ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ



ಚಿತ್ರದುರ್ಗ ಜಿಲ್ಲೆಯ ಚಿಕ್ಕೇನಹಳ್ಳಿ ಗ್ರಾಮದ ಹನುಮಂತಪ್ಪ ಹಾಗೂ ವಸಂತ ದಂಪತಿ ಪುತ್ರಿ ಎಚ್.ಅಶ್ವಿನಿ ಲೋಹಿತ್ ಅವರು ಮಂಡಿಸಿರುವ ಎ ಸ್ಟಡಿ ಆಫ್ ಪ್ರಗತಿ ಕೃಷ್ಣಾ ಗ್ರಾಮೀಣ ಬ್ಯಾಂಕ್ ಇನ್ ಚಿತ್ರದುರ್ಗ ಡಿಸ್ಟ್ರಿಕ್ಟ್ ವಿಷಯದ ಮಹಾಪ್ರಬಂಧಕ್ಕೆ ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಕುವೆಂಪು ವಿವಿಯ ಅರ್ಥಶಾಸ್ತ್ರ ವಿಭಾಗದ ಪ್ರೊ.ರವೀಂದ್ರನಾಥ್ ಎನ್. ಕದಮ್ ರವರು ಮಾರ್ಗದರ್ಶನ ಮಾಡಿರುತ್ತಾರೆ.

### ನೂತನ ಜಿಲ್ಲಾಧಿಕಾರಿ ಅಧಿಕಾರ ಸ್ವೀಕಾರ



» ದಾವಣಗೆರೆ

ದಾವಣಗೆರೆ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಡಾ.ವೆಂಕಟೇಶ್ ಎಂ.ವಿ. ಇವರು ಜುಲೈ 26 ರಂದು ಅಧಿಕಾರ ವಹಿಸಿಕೊಂಡರು. ಈ ಹಿಂದೆ ಜಿಲ್ಲಾಧಿಕಾರಿಯಾಗಿದ್ದ ಶಿವಾನಂದ ಕಾಪಾಶಿ ಪುಷ್ಪ ಗುಚ್ಛ ನೀಡಿ ನೂತನ ಜಿಲ್ಲಾಧಿಕಾರಿಯವರಿಗೆ ಸ್ವಾಗತಿಸಿದರು.

### ಗೃಹಲಕ್ಷ್ಮಿ: ಜಿಲ್ಲೆಯಲ್ಲಿ 1,10,000 ಫಲಾನುಭವಿಗಳ ನೊಂದಣಿ ಪೂರ್ಣ

» ದಾವಣಗೆರೆ

2023–24 ನೇ ಸಾಲಿನಲ್ಲಿ ಮಹಿಳಾ ಸಬಲೀಕರಣಕ್ಕಾಗಿ ಸರ್ಕಾರದ ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೊಳಿಸಿದ್ದು, ಯೋಜನೆಯಡಿ ಜಿಲ್ಲೆಯ ಪಡಿತರ ಕಾರ್ಡ್ ಹೊಂದಿದ ಕುಟುಂಬದ ಯಜಮಾನಿಗೆ ಮಾಸಿಕ ರೂ 2000 ಗಳನ್ನು ಡಿ.ಬಿ.ಟಿ ಮೂಲಕ ನೇರವಾಗಿ ಬ್ಯಾಂಕ್ ಖಾತೆಗೆಜಮಾಮಾಡಲಾಗುತ್ತದೆ.ಜಿಲ್ಲೆಯಲ್ಲಿ ಅಂದಾಜು 4,50,000 ಫಲಾನುಭವಿಗಳಿದ್ದು, ಸುಮಾರು 1,10,000 ಫಲಾನುಭವಿಗಳ ನೊಂದಣಿ ಕಾರ್ಯ ಪೂರ್ಣಗೊಂಡಿದ್ದು, ಉಳಿದ ಫಲಾನುಭವಿಗಳ ಅರ್ಜಿಗಳನ್ನು ಇನ್ನು ಒಂದು ವಾರದೊಳಗೆ ನೊಂದಣಿ ಮಾಡಲಾಗುತ್ತದೆ. ಜಿಲ್ಲೆಯಾದ್ಯಂತ ಒಟ್ಟು 411 ನೊಂದಣಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಅರ್ಜಿ ಸಲ್ಲಿಸಲು ಯಾವುದೇ ಕಾಲ ಮಿತಿಯಿರುವುದಿಲ್ಲ ಹಾಗೂ ನೊಂದಣಿಗೆ ಶುಲ್ಕ ಪಾವತಿಸುವಂತಿಲ್ಲ. ಯಾವುದೇ ಕೇಂದ್ರಗಳಲ್ಲಿ ನೊಂದಾಯಿಸಲು ಹಣ ಕೇಳಿದಲ್ಲಿ ಸಾರ್ವಜನಿಕರು ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಪೋಲೀಸ್ ಠಾಣೆ ಅಥವಾ ತಹಶೀಲ್ದಾರರ ಕಚೇರಿ ಸಂಪರ್ಕಿಸಿ ದೂರು ಸಲ್ಲಿಸಲು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೆಳೆ ವಿಮೆ ಯೋಜನೆ: ಜುಲೈ 31 ಕೊನೆಯ ದಿನ

» ಚಿತ್ರದುರ್ಗ

2023–24ನೇ ಸಾಲಿನ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಅಧಿಸೂಚಿಸಲಾಗಿದೆ. ಜುಲೈ 31 ವಿಮಾ ನೋಂದಣಿಗೆ ಕೊನೆಯ ದಿನವಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಅಡಿಕೆ ಬೆಳೆಗೆ 183 ಗ್ರಾಮ ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳು, ದಾಳಿಂಬೆ ಬೆಳೆಗೆ 164 ಗ್ರಾಮ ಪಂಚಾಯಿ, ನಗರ ಸ್ಥಳೀಯ ಸಂಸ್ಥೆಗಳು ಮತ್ತು ಮಾವು ಬೆಳೆಗೆ 180 ಗ್ರಾಮ ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳನ್ನು ವಿಮಾ ಘಟಕಗಳಾಗಿ ಅಧಿಸೂಚಿಸಲಾಗಿದೆ. ಮುಂಗಾರು ಹಂಗಾಮಿಗೆ ಅನುಮೋದಿಸಲಾದ ತೋಟಗಾರಿಕೆ ಬೆಳೆಗಳ ವಿಮಾ ಮೊತ್ತ, ವಿಮಾ ಕಂತಿನ ದರ ಹಾಗೂ ವಿಮಾ ಅನ್ವಯಿಸುವ ಅವಧಿ ವಿವರ: ಅಡಿಕೆ ವಿಮಾ ಮೊತ್ತ ರೂ. 128000, ರೈತರ ವಿಮಾ ಕಂತಿನ ದರ ರೂ.6400, ದಾಳಿಂಬೆ ವಿಮಾ ಮೊತ್ತ ರೂ. 127000, ರೈತರ ವಿಮಾ ಕಂತಿನ ದರ ರೂ.6350, ಮಾವು ವಿಮಾ ಮೊತ್ತ ರೂ.80000, ರೈತರ ವಿಮಾ ಕಂತಿನ ದರ ರೂ.4000. ಅಡಿಕೆ ಬೆಳೆಗೆ ವಿಮಾ ಅನ್ವಯಿಸುವ ಅವಧಿ 2023ರ ಆಗಸ್ಟ್ 1 ರಿಂದ 2024ರ ಜೂನ್ 30 ಆಗಿರುತ್ತದೆ. ದಾಳಿಂಬೆ ಮತ್ತು ಮಾವು ಬೆಳೆಗಳಿಗೆ ವಿಮಾ ಅನ್ವಯಿಸುವ ಅವಧಿ 2023ರ ಆಗಸ್ಟ್ 1 ರಿಂದ 2024 ಮೇ 31 ಆಗಿರುತ್ತದೆ. ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಮೊತ್ತವು ಹಾಗೂ ಪಾವತಿಸಬೇಕಾದ ವಿಮಾ ಕಂತಿನ ಮೊತ್ತವು ಒಂದೇ ಆಗಿರುತ್ತದೆ. ರೈತರು ಪ್ರಸಕ್ತ ಸಾಲಿನ ಪಹಣಿ ಪತ್ರಿಕೆ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯೊಂದಿಗೆ ಹತ್ತಿರದ ಗ್ರಾಮ ಒನ್ ಕೇಂದ್ರ ಅಥವಾ ಬ್ಯಾಂಕ್‌ಗಳಲ್ಲಿ ಅಥವಾ ಸಿ.ಎಸ್.ಸಿ ಕೇಂದ್ರಗಳಲ್ಲಿ ವಿಮಾ ಯೋಜನೆಗೆ ನೊಂದಾಯಿಸಿಕೊಳ್ಳಬಹುದು.

# ಗಣಿತ ವಿಷಯ ಬೋಧನೆ ಆಸಕ್ತಿದಾಯಕವಾಗಿರಲಿ

» ಚಿತ್ರದುರ್ಗ




ಗಣಿತ ವಿಷಯದಲ್ಲಿ ನಿಖರತೆ ಹೆಚ್ಚು. ಯಾವುದೇ ಗೊಂದಲಗಳಿಗೆ ಅವಕಾಶ ನೀಡದೇ ವಿದ್ಯಾರ್ಥಿಗಳು ಉತ್ತರಿಸಬೇಕು. ಪ್ರೌಢ ಶಾಲಾ ಹಂತದ ಮಕ್ಕಳಿಗೆ ಗಣಿತ ವಿಷಯದಲ್ಲಿ ಆಸಕ್ತಿ ಮೂಡುವಂತೆ ಶಿಕ್ಷಕರು ಬೋಧನೆ ಮಾಡಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ವತಿಯಿಂದ ನಗರದ ತರಾಸು ರಂಗಮಂದಿರದಲ್ಲಿ ಬುಧವಾರ ಪ್ರೌಢಶಾಲಾ ಶಿಕ್ಷಕರಿಗಾಗಿ ಆಯೋಜಿಸಲಾಗಿದ್ದ ಗಣಿತ ಶಿಕ್ಷಕರ ಜಿಲ್ಲಾ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಗಣಿತ ವಿಷಯ ಕಾರ್ಯಾಗಾರವನ್ನು ಥಿಯೋಡರ್ ಸರ್ಕಲ್ ರಚನಾ ಕ್ರಮವನ್ನು ಪರಿಹರಿಸುವ ಮೂಲಕ ಹಾಗೂ ಪೈಥಾಗೋರಸ್ ಪ್ರಮೇಯದ ಪ್ರಾತ್ಯಕ್ಷತೆ ಕೈಗೊಳ್ಳುವ ಮೂಲಕ ಉದ್ಘಾಟಿಸಿರುವುದು ಹೆಚ್ಚು ಅರ್ಥಪೂರ್ಣವಾಗಿದೆ. ಕಳೆದ ವರ್ಷದಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಗಣಿತ ವಿಷಯದಲ್ಲಿ ಚಿತ್ರದುರ್ಗ ಜಿಲ್ಲೆಯ ಮಕ್ಕಳು ಉತ್ತಮ ಸಾಧನೆ ತೋರಿದ್ದಾರೆ. ಇದರ ಫಲವಾಗಿ ಜಿಲ್ಲೆ ಗಣಿತ ವಿಷಯದಲ್ಲಿ ರಾಜ್ಯಕ್ಕೆ 2ನೇ ಸ್ಥಾನ ಹಾಗೂ ಒಟ್ಟಾರೆ ಫಲಿತಾಂಶದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಲಭಿಸಿದೆ. ಇದಕ್ಕೆ ಶ್ರಮಿಸಿದ ಎಲ್ಲಾ ಗಣಿತ ಹಾಗೂ ವಿಜ್ಞಾನ ಶಿಕ್ಷಕರಿಗೆ ಅಭಿನಂದನೆ ಸಲ್ಲಿಸಿದರು.

ಈ ಬಾರಿ ಗಣಿತ ಶಿಕ್ಷಕರು ಸವಾಲು ಸ್ವೀಕರಿಸಿ ರಾಜ್ಯಕ್ಕೆ ಪ್ರಥಮ ಸ್ಥಾನಗಳಿಸಲು ಪ್ರಯತ್ನಿಸಬೇಕು. ಶಿಕ್ಷಣ ಇಲಾಖೆ ಅಧಿಕಾರಿಗಳೂ ಈ ಬಾರಿಯ ಫಲಿತಾಂಶದ ಬಗ್ಗೆ ಹೆಚ್ಚಿನ ಸಂತಸಪಟ್ಟು ಮೈಮರೆಯದೇ, ಮುಂದಿನ ಬಾರಿಯೂ ಉತ್ತಮ ಸಾಧನೆ ತೋರಲು ಸದಾ ಜಾಗೃತರಾಗಿ ಕಾರ್ಯ ನಿರ್ವಹಿಸಬೇಕು. ದೇಶದಲ್ಲಿ ಸಾಂಪ್ರದಾಯಕವಾಗಿ ಗಣಿತ ಬೋಧಿಸುವ ಕ್ರಮ ಬೆಳದು ಬಂದಿದೆ. ಇಲ್ಲಿನ ಮಕ್ಕಳು ಕ್ಯಾಲ್ಯುಕಲೇಟರ್‌ಗಳಿಗೆ ಅಂಟಿಕೊಳ್ಳದೇ ಗಣಿತ ಸಮಸ್ಯೆಗಳನ್ನು ಪರಿಹರಿಸುವ ಕೌಶಲ್ಯ ಪಡೆದಿದ್ದಾರೆ. ಇಂದಿನ ತಂತ್ರಜ್ಞಾನವನ್ನು ಸಹ ಬಳಸಿ ಗಣಿತ ಶಿಕ್ಷಣ ಬೋಧನೆಯನ್ನು ಇನ್ನಷ್ಟು ಪರಿಣಾಕಾರಿಯಾಗುವಂತೆ ಬೋಧಿಸಬೇಕು ಎಂದು ಹೇಳಿದರು.

ಕಾರ್ಯಗಾರದಲ್ಲಿ ಶಿಕ್ಷಣ ಇಲಾಖೆ ಹೊರತಂದಿರುವ ಸಂಭ್ರಮ, ಸುಪ್ರಭ ಹಾಗೂ ವಿನೋದ ಗಣಿತ ಕೈಪಿಡಿಗಳನ್ನು ಬಿಡುಗಡೆಗೊಳಿಸಲಾಯಿತು. ಮೈಸೂರು ಜಿಲ್ಲೆಯಿಂದ ಆಗಮಿಸಿದ ಗಣಿತ ಶಿಕ್ಷಕರಾದ ಹರ್ಷ ಹಾಗೂ ಸತೀಶ್ ಗಣಿತ ಕಾರ್ಯಗಾರವನ್ನು ನಡೆಸಿಕೊಟ್ಟರು.

ಉದ್ಘಾಟನಾ ಸಮಾರಂಭದಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಹಿರಿಯೂರು ಕ್ಷೇತ್ರಶಿಕ್ಷಣಾಧಿಕಾರಿ ನಾಗಭೂಷಣ್, ಶಿಕ್ಷಣ ಇಲಾಖೆ ಹಿರಿಯ ಅಧಿಕಾರಿಗಳಾದ ಸಿ.ಎಂ.ತಿಪ್ಪೇಸ್ವಾಮಿ, ತಿಪ್ಪೇಸ್ವಾಮಿ, ವಿಷಯ ಪರಿವೀಕ್ಷಕರಾದ ಸವಿತಾ, ಗೋವಿಂದ, ಚಂದ್ರು, ಬಸವಣ್ಣ ಓಲೇಕಾರ, ಶಿಕ್ಷಕರ ಸಂಘದ ಅಧ್ಯಕ್ಷ ಶಿವಣ್ಣ ಸೇರಿದಂತೆ ಇತರರು ಇದ್ದರು.

# ಮಣಿಪುರ ಗಲಭೆ ನಿಯಂತ್ರಿಸುವಲ್ಲಿ 2 ಸರ್ಕಾರಗಳು ವಿಫಲ ಸಿಪಿಐ ಪ್ರತಿಭಟನೆ

» ಚಿತ್ರದುರ್ಗ




ಮಣಿಪುರದಲ್ಲಿ ನಡೆಯುತ್ತಿರುವ ಹಿಂಸಾಚಾರ ಗಲಭೆಯನ್ನು ನಿಯಂತ್ರಿಸುವಲ್ಲಿ ವಿಫಲವಾಗಿರುವ ಅಲ್ಲಿನ ಮುಖ್ಯಮಂತ್ರಿ ಹಾಗೂ ದೇಶದ ಪ್ರಧಾನಿ ನರೇಂದ್ರಮೋದಿ ಇವರುಗಳು ಕೂಡಲೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷ ಜಿಲ್ಲಾ ಮಂಡಳಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಯಿತು.

ಮೂರು ತಿಂಗಳಿನಿಂದಲೂ ಮಣಿಪುರದಲ್ಲಿ ಹಿಂಸೆ, ಕೊಲೆ, ಸುಲಿಗೆ, ಅತ್ಯಾಚಾರ ನಿರಂತರವಾಗಿ ನಡೆಯುತ್ತಿದೆ. ಇಬ್ಬರು ಮಹಿಳೆಯರ ನಗ್ನ ಮೆರವಣಿಗೆ ಮಾಡಿರುವುದು ಅಲ್ಲಿನ ಘೋರತನಕ್ಕೆ ಸಾಕ್ಷಿಯಾಗಿದೆ. ಇಷ್ಟಾದರು ಮಣಿಪುರ ಮುಖ್ಯಮಂತ್ರಿ, ಪ್ರಧಾನಿ ಮೋದಿ ಅಲ್ಲಿನ ಜನಾಂಗೀಯ ಘರ್ಷಣೆಯನ್ನು ನಿಯಂತ್ರಿಸುವಲ್ಲಿ ಅಸಹಾಯಕರಾಗಿರುವುದು ನೋವಿನ ಸಂಗತಿ ಎಂದು ಪ್ರತಿಭಟನಾಕಾರರು ಧಿಕ್ಕಾರಗಳನ್ನು ಕೂಗಿದರು.

ಮಣಿಪುರದಲ್ಲಿ ಅಕ್ರಮ ಶಸ್ತ್ರಾಸ್ತ್ರಗಳನ್ನು ಹೊಂದಿರುವುದನ್ನು ಕೂಡಲೆ ವಶಪಡಿಸಿಕೊಳ್ಳಬೇಕು. ಅರಣ್ಯದಲ್ಲಿ ಅಕ್ರಮವಾಗಿ ಬೆಳೆಯುತ್ತಿರುವ ಗಸಗಸೆ ಕೃಷಿಯನ್ನು ತಡೆಯಬೇಕು. ಅಕ್ರಮ ವಲಸೆ ತಡೆಯಲು ಸೂಕ್ತ ಬಂದೋಬಸ್ತ್ ಒದಗಿಸಬೇಕು.

ಮಣಿಪುರ ಹೆದ್ದಾರಿಯನ್ನು ಸಂಚಾರಕ್ಕೆ ಮುಕ್ತಗೊಳಿಸಿ ಅಲ್ಲಿನ ಜನತೆಗೆ ಅಗತ್ಯ ಆಹಾರ ಪದಾರ್ಥ ಮತ್ತು ಔಷಧಿಗಳನ್ನು ಪೂರೈಸಿ ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು. ಅದಾನಿ ಮತ್ತಿತರೆ ಕಾರ್ಪೊರೇಟ್ ಕಂಪನಿಗಳಿಗೆ ಗಣಿಗಾರಿಕೆ ನಡೆಸಲು ಅರವತ್ತೈದು ಸಾವಿರ ಎಕರೆ ಅರಣ್ಯ ಭೂಮಿ ನೀಡುವ ಪ್ರಸ್ತಾಪವನ್ನು ಅಲ್ಲಿನ ಸರ್ಕಾರ ಕೈಬಿಡಬೇಕು.

ಎನ್.ಎಫ್.ಐ.ಡಬ್ಲ್ಯೂ. ನಾಯಕಿಯರ ಮೇಲೆ ದಾಖಲಿಸಿರುವ ಎಫ್.ಐ.ಆರ್.ನ್ನು ಕೂಡಲೆ ರದ್ದುಪಡಿಸುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು. ಸಿ.ಪಿ.ಐ.ಜಿಲ್ಲಾ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು, ತಾಲ್ಲೂಕು ಕಾರ್ಯದರ್ಶಿ ಕಾಂ.ಟಿ.ಆರ್.ಉಮಾಪತಿ, ಸಹ ಕಾರ್ಯದರ್ಶಿ ಕಾಂ.ಈ.ಸತ್ಯಕೀರ್ತಿ, ಮುಖಂಡರುಗಳಾದ ಕಾಂ.ಬಸವರಾಜಪ್ಪ ಬಿ. ಕಾಂ.ರಾಜಪ್ಪ, ಕಾಂ.ತಿಪ್ಪೇಸ್ವಾಮಿ, ಕಾಂ. ಎಂ.ಬಿ.ಜಯದೇವಮೂರ್ತಿ, ಕಾಂ. ರವಿಕುಮಾರ್,ಕಾಂ.ಸಾವಿತ್ರಮ್ಮ,ಕಾಂ.ಆಶಾರಾಣಿ, ಕಾಂ.ಭಾಗ್ಯಮ್ಮ, ಕಾಂ. ವಿನೋಧಮ್ಮ ಇನ್ನು ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ರಾಜ್ಯ ಸರ್ಕಾರಿ ನೌಕರರ ಸಂಘಟನಾ ಕಾರ್ಯದರ್ಶಿಯಾಗಿ ಸಿ.ಟಿ.ವೀರೇಶ್ ಅಧಿಕಾರ ಸ್ವೀಕಾರ



» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ಚಳ್ಳಕೆರೆಯೂ ಸೇರಿದಂತೆ ವಿವಿಧೆಡೆ ಶಿಕ್ಷಕರಾಗಿ ಕಾರ್ಯನಿರ್ವಹಿಸಿದ ಸಿ.ಟಿ.ವೀರೇಶ್‌ರವರನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸಂಘಟನಾ ಕಾರ್ಯದರ್ಶಿಯನ್ನಾಗಿ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಾಕ್ಷರಿ ನೇಮಕ ಮಾಡಿರುತ್ತಾರೆ. ಬೆಂಗಳೂರಿನ ಸರ್ಕಾರಿ ನೌಕರರ ಸಂಘದ ಕಾರ್ಯಾಲಯದಲ್ಲಿ ರಾಜ್ಯಮಟ್ಟದ ಪದಾಧಿಕಾರಿಗಳ ಸಮ್ಮುಖದಲ್ಲಿ ನೇಮಕಾತಿ ಪತ್ರ ಮತ್ತು ಅಧಿಕಾರ ಪದಗ್ರಹಣ ಮಾಡಿದ ಸಿ.ಟಿ.ವೀರೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಹಕಾರ ಪತ್ತಿನ ಸಂಘ, ತಾಲ್ಲೂಕು ಸರ್ಕಾರಿ ನೌಕರರ ಸಂಘದಲ್ಲಿ ವಿವಿಧ ಜವಾಬ್ದಾರಿಯನ್ನು ಹೊತ್ತು ಕಾರ್ಯನಿರ್ವಹಿಸಿದ್ದಲ್ಲದೆ, ತಾಲ್ಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ನಿವೇಶನವನ್ನೂ ಪ್ರತ್ಯೇಕವಾಗಿ ಜಮೀನು ಖರೀದಿಸಿ ವಿಂಗಡಿಸಿ ನೀಡುವ ಕಾರ್ಯದಲ್ಲಿ ಮುಂದಾಗಿದ್ದರೆ. ರಾಜ್ಯ ಸಂಘಟನಾ ಕಾರ್ಯದರ್ಶಿಯನ್ನಾಗಿ ಆಯ್ಕೆ ಮಾಡಿದ್ದಕ್ಕೆ ಸಂತಸ ವ್ಯಕ್ತಪಡಿಸಿದ್ದಾರೆ. ಇದೇ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾ ಮತ್ತು ತಾಲ್ಲೂಕು ಘಟಕದಲ್ಲಿ ಹಲವಾರು ಹಂತದಲ್ಲಿ ನಾನು ಕಾರ್ಯನಿರ್ವಹಿಸಿದ್ದೇನೆ. ಆದರೆ, ರಾಜ್ಯಮಟ್ಟದಲ್ಲಿ ನನಗೆ ಸ್ಥಾನಮಾನ ನೀಡಿದ್ದು ನನಗೆ ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ರಾಜ್ಯ ಸರ್ಕಾರಿ ನೌಕರರ ಹಿತ ಕಾಪಾಡಲು, ಸರ್ಕಾರಿ ನೌಕರರ ಬೇಡಿಕೆಗಳ ಬಗ್ಗೆ ಸರ್ಕಾರವನ್ನು ಒತ್ತಾಯಿಸಲು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ತಾಲ್ಲೂಕಿನ ಹಲವಾರು ಶಿಕ್ಷಕರು ಸಿ.ಟಿ.ವೀರೇಶ್‌ರವರನ್ನು ಅಭಿನಂದಿಸಿದರು. **ಅಭಿನಂದನೆ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ ನೇಮಕಗೊಂಡ ಸಿ.ಟಿ.ವೀರೇಶ್‌ರವರಿಗೆ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಲಿಂಗೇಗೌಡ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ನಾಟಕ ಅಕಾಡೆಮೆ ಮಾಜಿ ಸದಸ್ಯ ಪಿ.ತಿಪ್ಪೇಸ್ವಾಮಿ, ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳಾದ ಎಸ್.ಬಿ.ತಿಪ್ಪೇಸ್ವಾಮಿ, ಡಿ.ದಯಾನಂದ, ಸುರೇಶ್, ಎಚ್.ತಿಪ್ಪೇಸ್ವಾಮಿ ಅಭಿನಂದಿಸಿದ್ದಾರೆ.

### ಬಿಬಿಎಂಪಿ ಅಧಿಕಾರಿಗಳಿಂದ ರೌಂಡ್ಸ್

**ಬೆಂಗಳೂರು:** ಬಿಬಿಎಂಪಿ ಅಧಿಕಾರಿಗಳು ಬೆಳ್ಳಂಬೆಳಗ್ಗೆ ಬೊಮ್ಮನಹಳ್ಳಿ ರೌಂಡ್ಸ್ ಹಾಕುತ್ತಿದ್ದಾರೆ. ಬೊಮ್ಮನಹಳ್ಳಿ ವಲಯ ಜಂಟಿ ಆಯುಕ್ತ ಅಜಿತ್ ಹಾಗೂ ಅಧಿಕಾರಿಗಳೊಂದಿಗೆ ಬಡಾವಣೆ ವೀಕ್ಷಣೆ ಮಾಡಿದ್ದು, ರಾಜಕಾಲುವೆ ಮತ್ತು ಕಸ ವಿಲೇವಾರಿ ಬಗ್ಗೆ ಪರಿಶೀಲನೆ ನಡೆಸಿದ್ದಾರೆ.

# ತಾಲ್ಲೂಕಿನಾದ್ಯಂತ ಪ್ರತಿನಿತ್ಯ ಜಿಟಿಜಿಟಿ ಮಳೆಗೆ ಹೈರಾಣಾದ ಜನ

**ಚಳ್ಳಕೆರೆ:** ಕಳೆದ ಸುಮಾರು ಹತ್ತು ದಿನಗಳಿಂದ ನಗರವೂ ಸೇರಿದಂತೆ ತಾಲ್ಲೂಕಿನಾದ್ಯಂತ ಪ್ರತಿನಿತ್ಯ ಬರುತ್ತಿರುವ ಜಿಟಿಜಿಟಿ ಮಳೆ ಜನರನ್ನು ಹೈರಾಣಾಗಿಸಿದೆ. ಮಳೆ ಹಿನ್ನೆಲೆಯಲ್ಲಿ ವಾಣಿಜ್ಯೋದ್ಯಮವೂ ಸೇರಿದಂತೆ ಎಲ್ಲಾ ವ್ಯವಹಾರಗಳು ಸಂಪೂರ್ಣ ಸ್ಥಗಿತಗೊಂಡಿವೆ. ಪ್ರತಿನಿತ್ಯ ಮಳೆಯಿಂದ ಜನರು ಈಗಾಗಲೇ ರೋಸಿದ್ದು, ದಿನನಿತ್ಯದ ವ್ಯವಹಾರಗಳಿಗೆ ಭಾರಿ ಅಡಚರಣೆ ಉಂಟಾಗಿದೆ. ಪ್ರಾರಂಭದ ಹಂತದಲ್ಲಿ ಮಳೆಯ ಆಗಮನದಿಂದ ಸಂತಸಗೊಂಡಿದ್ದ ರೈತರು ಈ ನಿರಂತರ ಮಳೆಯಿಂದ ಮತ್ತೊಮ್ಮೆ ಭಯಭೀತರಾಗಿದ್ದಾರೆ. ಕಾರಣ, ತೇವಾಂಶ ಹೆಚ್ಚಾಗಿ ಶೇಂಗವೂ ಸೇರಿದಂತೆ ಎಲ್ಲಾ ಬೆಳೆಗಳು ಮೊಳಕೆ ಹೊಡೆಯದೆ ಭೂಮಿಯಲ್ಲೇ ಕರಗುವ ಸಂಭವಿದೆ ಎನ್ನುತ್ತಾರೆ. ಪ್ರಸ್ತುತ ವರ್ಷದ ಪುಷ್ಯ ಮಳೆ ಪ್ರಾರಂಭದ ಹಂತದಲ್ಲಿ ಬೆಳೆಗಳ ಜೊತೆಗೆ ಕುರಿ ಮೇಕೆಗಳನ್ನು ಬಲಿ ಪಡೆದಿತ್ತು. ಗ್ರಾಮಾಂತರ ಪ್ರದೇಶದಲ್ಲಿ ಹಲವಾರು ಮನೆಗಳು ನೆಲಕ್ಕುರುಳಿ ಲಕ್ಷಾಂತರ ನಷ್ಟ ಉಂಟು ಮಾಡಿತ್ತು. ಪ್ರಸ್ತುತ ಮಳೆಯಿಂದಲೂ ರೈತರು ಬೆಳೆಯ ಆಸೆಯನ್ನು ಕೈಬಿಡತೊಡಗಿದ್ದು, ವ್ಯಾಪಾರಸ್ಥರು ಸಹ ವ್ಯಾಪಾರ ಬಗ್ಗೆ ಕಳವಳಕ್ಕೆ ಈಡಾಗಿದ್ದಾರೆ.



ಚಳ್ಳಕೆರೆ ತಾಲ್ಲೂಕಿನ ಸಾಣಿಕೆರೆ ಗ್ರಾಮದ ಜಿಟಿಜಿಟಿ ಮಳೆಯಿಂದ ಲಕ್ಷ್ಮಣ ಎಂಬುವವರ ಮನೆಯ ಗೋಡೆ ಕುಸಿದಿರುವುದು.

## ಪ್ರಮುಖ ಸುದ್ದಿ

# ಕಾರ್ಗಿಲ್ ವಿಜಯೋತ್ಸವ ವೀರಸೈನಿಕರ ಕಾರ್ಯದಕ್ಷತೆಗೆ ಸಾಕ್ಷಿ





» ಚಳ್ಳಕೆರೆ

ಭಾರತದ ಇತಿಹಾಸದಲ್ಲಿ ಕಾರ್ಗಿಲ್ ವಿಜಯೋತ್ಸವ ಸುವರ್ಣಾಕ್ಷರಲ್ಲಿ ಬರೆದಿಡುವಂತಾಗಿದ್ದು, ನಮ್ಮ ಹೆಮ್ಮೆಯ ಸೈನಿಕರು ವೀರಾವೇಶದಿಂದ ಹೋರಾಡಿ ಶತ್ರುಗಳಿಂದ ಕಾರ್ಗಿಲ್‌ನ್ನು ವಶಪಡಿಸಿಕೊಂಡ ಸುದಿನವಾಗಿದೆ. ಕಾರ್ಗಿಲ್ ವಿಜಯ ನಮ್ಮ ದೇಶದ ಹೆಮ್ಮೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು,ನಗರರೋಟರಿಬಾಲಭವನದಲ್ಲಿತಾಲ್ಲೂಕಿನ ನಿವೃತ್ತ ಯೋಧರ ಸಂಘದಿಂದ ಹಮ್ಮಿಕೊಂಡಿದ್ದ ಕಾರ್ಗಿಲ್ ವಿಜಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ದೇಶದ ಇತಿಹಾಸವನ್ನು ನೋಡಿದಾಗ ನಮ್ಮ ಭಾರತೀಯ ಸೈನಿಕರು ಎಂದಿಗೂ ಸೋಲನ್ನು ಅನುಭವಿಸಿಲ್ಲ. ಶತ್ರು ರಾಷ್ಟ್ರಗಳನ್ನು ಸೋಲಿಸುವುದಲ್ಲದೆ, ದೇಶವನ್ನು ವೈರಿಗಳಿಂದ ಕಾಪಾಡಿದ ಹೆಮ್ಮೆ ನಮ್ಮ ಸೈನಿಕರದ್ದು. ರಾಷ್ಟ್ರದ ಗಡಿಯುದ್ದಕ್ಕೂ ಪ್ರತಿನಿತ್ಯ ಸಾವಿರಾರು ಸೈನಿಕರು ಹಗಲು, ರಾತ್ರಿ ಎನ್ನದೆ ನಮ್ಮ ದೇಶವನ್ನು ಕಾಪಾಡುತ್ತಿದ್ದಾರೆ. ಸೈನಿಕರ ಕರ್ತವ್ಯ ಪ್ರಜ್ಞೆಯ ಬಗ್ಗೆ ಇಡೀ ದೇಶ ಹೆಮ್ಮೆ ಪಡುತ್ತದೆ. ಕಾರ್ಗಿಲ್ ಯುದ್ಧ ಸಂದರ್ಭದಲ್ಲಿ ನಮ್ಮ ಸೈನಿಕರಿಗೆ ಧೈರ್ಯ ತುಂಬಿ ವಿಜಯಗಳಿಸುವ ನಿಟ್ಟಿನಲ್ಲಿ ತಮ್ಮದೇಯಾದ ತಂತ್ರದಿಂದ ಯಶಸ್ವಿಯಾದ ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿರವರನ್ನು ಸಹ ನಾವು ಎಂದಿಗೂ ಮರೆಯುವಂತಿಲ್ಲ. ದೇಶದ ಪ್ರತಿಯೊಬ್ಬ ನಾಗರೀಕರು ನಮ್ಮ ಭಾರತೀಯ ಸೈನ್ಯದ ಕಾರ್ಯದಕ್ಷತೆಯ ಬಗ್ಗೆ ಹೆಮ್ಮೆ ಪಡಬೇಕು ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಇಂಡಸ್ ವ್ಯಾಲಿ ಶಾಲೆಯ ಆಡಳಿತಾಧಿಕಾರಿ ಸಿ.ಚಿಕ್ಕಣ್ಣ ಮಾತನಾಡಿ, ಭಾರತೀಯ ಸೈನ್ಯ ನಮ್ಮೆಲ್ಲರ ಆತ್ಮಸ್ಥೈರ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಯಾವುದೇ ಕಾರಣಕ್ಕೂ ವೈರಿಗಳು ದೇಶದ ಗಡಿಯಲ್ಲಿ ನುಗ್ಗದಂತೆ ಸದಾ ಜಾಗೃತಿಯಿಂದ ಕಾವಲು ಕಾಯುವವರು ನಮ್ಮ ಸೈನಿಕರು. ಉಗ್ರಗಾಮಿಗಳ ಅಟ್ಟಹಾಸವನ್ನು ಸದೆಬಡೆಯುವ ಸೈನಿಕರ ಕಾರ್ಯ ಮೆಚ್ಚುವಂತಹದ್ದು ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಯೋಧರ ಸಂಘದ ಜಿಲ್ಲಾಧ್ಯಕ್ಷ ಸತ್ಯನಾರಾಯಣರೆಡ್ಡಿ, ತಾಲ್ಲೂಕು ಅಧ್ಯಕ್ಷ ಗೋವಿಂದರೆಡ್ಡಿ,ಸೀತಾರಾಮಶಾಸ್ತ್ರಿ,ಮಂಜುನಾಥರೆಡ್ಡಿ, ಸಣ್ಣಸೂರಯ್ಯಶಿವಕುಮಾರ್,ತಿಮ್ಮಣ್ಣ,ಮಧುಸೂಧನ್, ಬಸವರಾಜು, ದಯಾನಂದ ಮುಂತಾದವರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೂ ಮುನ್ನ ನಗರದ ವಾಲ್ಮೀಕಿ ವೃತ್ತದಿಂದ ಕಾರ್ಗಿಲ್ ವಿಜಯೋತ್ಸವದ ಮೆರವಣಿಗೆಯನ್ನು ನಿವೃತ್ತ ಯೋಧರು ನಡೆಸಿದರು.

## ಫಾಸ್ಟ್ ನ್ಯೂಸ್

### ಟಿ.ಬಿ ಮುಕ್ತ ಸಮಾಜಕ್ಕೆ ಎಲ್ಲರೂ ಸಹಕರಿಸಿ: ಡಾ. ದೇವರಾಜ ಪಿ ಪಟಗೆ

» ದಾವಣಗೆರೆ

ಟಿ.ಬಿ ಕಾಯಿಲೆ ಬಗ್ಗೆ ಕೀಳರಿಮೆ ಬೇಡ, ತಕ್ಷಣ ವೈದ್ಯರ ಬಳಿ ಹೋಗಿ ಚಿಕಿತ್ಸೆ ಪಡೆಯಬೇಕು ಎಂದು ದಾವಣಗೆರೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ದೇವರಾಜ ಪಿ. ಪಟಗೆ ತಿಳಿಸಿದರು. ಬುಧವಾರ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿಯಲ್ಲಿ ಜರುಗಿದ ಸಕ್ರಿಯ ಕ್ಷಯರೋಗ ಪತ್ತೆ ಆಂದೋಲ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದಾವಣಗೆರೆ ತಾಲ್ಲೂಕಿನಾದ್ಯಂತ ಜುಲೈ.25 ರಿಂದ ಸಕ್ರಿಯ ಕ್ಷಯರೋಗ ಪತ್ತೆ ಆಂದೋಲನಾ ಕಾರ್ಯ ನಡೆಯುತ್ತಿದ್ದು, ಎಲ್ಲಾ ಸಾರ್ವಜನಿಕರು ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಸಿಬ್ಬಂದಿಗಳು ತಮ್ಮ ಮನೆಗೆ ಬಂದಾಗ ಸರಿಯಾಗಿ ಮಾಹಿತಿಯನ್ನು ನೀಡಬೇಕು ಹಾಗೂ ಜನರಲ್ಲಿ ರೋಗದ ಬಗ್ಗೆ ಅರಿವು ಮೂಡಿಸಬೇಕು. 2025 ಕ್ಕೆ ಕ್ಷಯಮುಕ್ತ ಭಾರತಕ್ಕೆ (TB Free INDIA) ಎಲ್ಲರೂ ಕೈ ಜೋಡಿಸುವಂತಗಬೇಕು ಎಂದರು. ಹಿರಿಯ ಕ್ಷಯರೋಗ ಚಿಕಿತ್ಸಾ ಮೇಲ್ವಿಚಾರಕರಾದ ಎನ್.ಸಿ. ಹಾಲಸ್ವಾಮಿ ಹಾಗೂ ಎಂ.ಎಸ್. ಬಸವರಾಜ ಅವರು ಆರೋಗ್ಯ ಸಿಬ್ಬಂದಿಗಳಿಗೆ ತರಬೇತಿ ನೀಡಿದರು. ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು, ಆರೋಗ್ಯ ನೀರಿಕ್ಷಣಾಧಿಕಾರಿಗಳು ಉಪಸ್ಥಿತರಿದ್ದರು.

### ಮಹದೇಶ್ವರ ಬೆಟ್ಟದಲ್ಲಿ ಉಚಿತ ಸಾಮೂಹಿಕ ವಿವಾಹ ನೊಂದಣಿಗೆ ಅವಕಾಶ



» ಚಾಮರಾಜನಗರ

ಜಿಲ್ಲೆಯ ಹನೂರು ತಾಲ್ಲೂಕಿನ ಮಹದೇಶ್ವರ ಬೆಟ್ಟದ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಉಚಿತ ಸಾಮೂಹಿಕ ವಿವಾಹವನ್ನು ಆಗಸ್ಟ್ 23ರಂದು ಏರ್ಪಡಿಸಿದ್ದು, ಈ ಸಾಮೂಹಿಕ ವಿವಾಹದಲ್ಲಿ ವಿವಾಹವಾಗಲು ಬಯಸುವವರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಗಸ್ಟ್ 23ರಂದು ಬೆಳಿಗ್ಗೆ 9.30 ರಿಂದ 9.50 ಗಂಟೆಯವರೆಗೆ ಸಲ್ಲುವ ಶುಭ ಲಗ್ನದಲ್ಲಿ ಉಚಿತ ಸಾಮೂಹಿಕ ವಿವಾಹ ನೆರವೇರಲಿದೆ. ವಧುವಿಗೆ ಚಿನ್ನದ ಮಾಂಗಲ್ಯ, ಬೆಳ್ಳಿ ಕಾಲುಂಗುರ, ಸೀರೆ–ರವಿಕೆ ಹಾಗೂ ವರನಿಗೆ ಪಂಚೆ, ಶರ್ಟ್, ಟವಲ್ ಅನ್ನು ಉಚಿತವಾಗಿ ನೀಡಲಾಗುತ್ತದೆ. ವಧು ವರರ ಕಡೆಯವರು ತಲಾ 10 ಜನಕ್ಕೆ ಮೀರದಂತೆ ಭಾಗವಹಿಸಲು ಅವಕಾಶವಿದ್ದು, ಇವರಿಗೆ ವಸತಿ ಹಾಗೂ ಊಟದ ವ್ಯವಸ್ಥೆ ಮಾಡಲಾಗುತ್ತದೆ.

ವರನಿಗೆ 21 ವರ್ಷ, ವಧುವಿಗೆ 18 ವರ್ಷ ಪೂರ್ಣಗೊಂಡಿರಬೇಕು. ಬಾಲ್ಯ ವಿವಾಹ ಹಾಗೂ ಎರಡನೇ ಮದುವೆಗೆ ಅವಕಾಶವಿರುವುದಿಲ್ಲ. ಈ ಹಿಂದೆ ಮದುವೆ ಆಗಿರದ ಬಗ್ಗೆ ಅವರು ವಾಸಿಸುವ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯಿತಿ ಕಚೇರಿ ಅಥವಾ ನಗರ ಸ್ಥಳೀಯ ಸಂಸ್ಥೆಗಳಿಂದ ರುಜುವಾತು ಪತ್ರ ಪಡೆದು ಸಲ್ಲಿಸಬೇಕು.

ನಿಗದಿತ ನಮೂನೆ ಅರ್ಜಿಯನ್ನು ಬೆಟ್ಟದ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಅವರಿಂದ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಯೊಂದಿಗೆ ವಯಸ್ಸಿನ ಬಗ್ಗೆ ಶಾಲೆಯಿಂದ ಪಡೆದ ದಾಖಲಾತಿ ಪತ್ರ ಅಥವಾ ಮೂಳೆ ತಜ್ಞರಿಂದ ಪಡೆದ ದೃಢೀಕರಣ ಪತ್ರ, ವಧು ಮತ್ತು ವರನ ಜೋಡಿಯ ಮೂರು ಭಾವಚಿತ್ರ, ವಧು ಮತ್ತು ವರನ ಜಾತಿಯ ಬಗ್ಗೆ ತಹಶೀಲ್ದಾರರಿಂದ ಪಡೆದ ದೃಢೀಕರಣ ಪತ್ರ, ಆಧಾರ್ ಕಾರ್ಡ್, ವಾಸಸ್ಥಳ ದೃಢೀಕರಣ ಪತ್ರವನ್ನು ಲಗತ್ತಿಸಿ ಆಗಸ್ಟ್ 10ರ ಸಂಜೆ 5 ಗಂಟೆಯೊಳಗೆ ಸಲ್ಲಿಸಬೇಕು.

ಮಾಹಿತಿಗಾಗಿ 9480065393, 9113215342, 08225–272128 ಸಂಪರ್ಕಿಸುವಂತೆ ಪ್ರಾಧಿಕಾರದ ಕಾರ್ಯದರ್ಶಿ ಗೀತಾ ಹುಡೇದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಜಿಲ್ಲಾ ಬೇಡ ಜಂಗಮ ಸಮಾಜ ಸಂಸ್ಥೆ,ಎಸ್ಸೆಸ್ಸೆಲ್ಸಿಯಲ್ಲಿ ಶೇ.90ಕ್ಕಿಂತ ಹೆಚ್ಚಿನ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.85ಅಧಿಕ ಅಂಕ ಪಡೆದು ಉತ್ತೀರ್ಣರಾದ ಜಿಲ್ಲೆಯ ಜಂಗಮ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ನಗರದಲ್ಲಿ ಏರ್ಪಡಿಸಿದೆ. ಆಸಕ್ತ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಆಗಸ್ಟ್ 10ರೊಳಗೆ ನಗರದ ಮೆದೇಹಳ್ಳಿ ರಸ್ತೆ,ಅಗ್ನಿಶಾಮಕ ದಳದ ಕಚೇರಿ ಬಳಿ, ಕೆವಿಆರ್ ಕಾಂಪ್ಲೆಕ್ಸ್‌ನಲ್ಲಿರುವ ಸಂಸ್ಥೆ ಕಚೇರಿಗೆ ಅರ್ಜಿ ಸಲ್ಲಿಸಬಹುದು. ಸದ್ಯದಲ್ಲೇ ನಿಗದಿಯಾಗಲಿರುವ ಸಮಾರಂಭದಲ್ಲಿ ಪದವಿ,ಸ್ನಾತ ಕೋತ್ತರ ಪದವಿಗಳಲ್ಲಿ ರ□□□ಂಕ್,ಅತ್ಯುನ್ನತ ಶ್ರೇಣಿಗಳನ್ನು ಪಡೆದ ಮ ತ್ತು ಡಾಕ್ಟರೇಟ್ ಪಡೆದ ಜಂಗಮ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 9449681797ನ್ನು ಸಂಪರ್ಕಿಸಿ.

# ಮಣಿಪುರ ರಾಜ್ಯದಲ್ಲಿ ನಡೆದ ಮಹಿಳೆಯರ ಬೆತ್ತಲೆ ಮೆರವಣಿಗೆ ಹಾಗೂ ಅತ್ಯಾಚಾರ ಖಂಡಿಸಿ ಪ್ರತಿಭಟನೆ

» ಮೊಳಕಾಲ್ಮೂರು ಸುದ್ದಿ




ಮಣಿಪುರ ರಾಜ್ಯದಲ್ಲಿ ನಡೆದ ಮಹಿಳೆಯರ ಬೆತ್ತಲೆ ಮೆರವಣಿಗೆ ಹಾಗೂ ಅತ್ಯಾಚಾರ ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮತ್ತು ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು

ಮೊಳಕಾಲ್ಮೂರು ಪಟ್ಟಣದ ತಹಸೀಲ್ದಾರ್ ಕಛೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿ ತಪ್ಪಿತಸ್ತರಿಗೆ ಕಠಿಣ ಶಿಕ್ಷೆಯಾಗಬೇಕು ಹಾಗೂ ತಪ್ಪಿತಸ್ತರಿಗೆ ಸಾರ್ವಜನಿಕವಾಗಿ ಗಲ್ಲು ಶಿಕ್ಷೆ ನೀಡಬೇಕು ಎಂದು ಘನವೆತ್ತ ರಾಷ್ಟ್ರಪತಿಗಳಿಗೆ ತಹಶೀಲ್ದಾರ್ ಮೂಲಕ ಮನವಿಸಲ್ಲಿಸಿ ಒಕ್ಕೊರಲಿನಿಂದ ಒತ್ತಾಯಿಸಿದರು

ದೇಶದಲ್ಲಿ ನಾಗರೀಕ ಸಮಾಜ ತಲೆ ತಗ್ಗಿಸುವಂತೆ ಮಹಿಳೆಯರನ್ನು ಬೆತ್ತಲೆ ಮಾಡಿ ಮೆರವಣಿಗೆ ಮಾಡಿ ಅತ್ಯಾಚಾರ ಮಾಡಿರುವುದು ಅಮಾನುಷವಾದ ಕೃತ್ಯ ವಾಗಿದ್ದು ಇಂತಹ ಕೃತ್ಯ ವೆಸಗಿರುವ ಪರಮ ಪಾಪಿಗಳನ್ನು ಸೂಕ್ತ ಕಾನೂನು ಕ್ರಮ ಜರುಗಿಸಿ ಸಾರ್ವಜನಿಕವಾಗಿ ಮರಣ ದಂಡನೆಗೆ ಗುರಿಪಡಿಸಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು

ಅತ್ಯಾಚಾರಕ್ಕೆ ಒಳಗಾದ ಮಹಿಳೆಯರಲ್ಲಿ ಒಬ್ಬರು ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಹೋರಾಡಿದ ಮಾಜಿ ಯೋಧನ ಮಾಡದಿಯಾಗಿದ್ದು ದೇಶ ರಕ್ಷಣೆಗೆ ಹೋರಾಡಿದ ನಾನು ನನ್ನ ಮಡದಿಯನ್ನು ರಕ್ಷಿಸಸಲು ಸಾಧ್ಯವಾಗಲ್ಲಿಲ್ಲ ಎಂದು ಹೇಳುವುದಾದರೆ ದೇಶದಲ್ಲಿ ದೌರ್ಜನ್ಯ ದಬ್ಬಾಳಿಕೆ ಮತ್ತು ಅಜಾಗರುಕತೆ ಎಲ್ಲಿಗೆ ಬಂದಿದೆಎಂಬುವುದನ್ನುತಿಳಿಯಬೇಕಾಗಿದೆ ಇತಹ ಅಮಾನವೀಯ ಘಟನೆಗೆ ಕಾರಣರಾದ ದುಷ್ಕರ್ಮಿಗಳಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಅಗ್ರಹಿಸಿದರು

ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ದಲಿತರ ಹಿಂದುಳಿದವರ ಅಲ್ಪಸಂಖ್ಯಾತರ ರೈತರ ಕೂಲಿಕಾರ್ಮಿಕರ ಮೇಲೆ ದೌರ್ಜನ್ಯ ದಬ್ಬಾಳಿಕೆ ಅತ್ಯಾಚಾರ ಹೆಚ್ಚಾಗಿದ್ದು ಇಂತಹ ಅಮಾನವೀಯ ಕೃತ್ಯಕ್ಕೆ ಕಾರಣರಾದವರನ್ನು ಸೂಕ್ತ ಕಾನೂನು ಕ್ರಮ ಜರುಗಿಸಿ ನೊಂದ ನಾಗರಿಕರಿಗೆ ನ್ಯಾಯ ಒದಗಿಸಬೇಕಾಗಿದೆ ಎಂದು ಮನವಿ ಮಾಡಿದರು

ದೇಶದ ನಾಗರೀಕ ಸಮಾಜವೆ ತಲೆ ತಗ್ಗಿಸುವಂತ ಅಮಾನವೀಯ ಘಟನೆ ನಡೆದರು ಸಹ ಕೇಂದ್ರ ಸರ್ಕಾರದ ಪ್ರಭಾವಿ ಮಹಿಳಾ ಸಚಿವರಾದ ನಿರ್ಮಲಾ ಸೀತಾರಾಮನ್ ಸ್ಮೃತಿ ಇರಾನಿ ಶೋಭಾ ಕರಂದ್ಲಾಜೆ ದ್ವನಿ ಎತ್ತದಿರುವುದು ಅತ್ಯಂತ ವಿಷಾದದ ಸಂಗತಿಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು

ಬಿಜೆಪಿ ನೇತೃತ್ವದ ಸರ್ಕಾರ ಹೊಂದಿರುವ ರಾಜ್ಯಗಳಲ್ಲಿ ದೌರ್ಜನ್ಯಗಳು ಹೆಚ್ಚಾಗಿದ್ದು ಕೇಂದ್ರ ಸರ್ಕಾರ ಯಾವುದೆ ಕ್ರಮಕ್ಕೆ ಮುಂದಾಗದಿರುವುದು ಪರೋಕ್ಷ ಬೆಂಬಲ ಎದ್ದು ಕಾಣುತ್ತಿದೆ ಇಂತಹ ದುರಾಡಳಿತವನ್ನು ಹತ್ತಿಕ್ಕಲು ಮುಂದಿನ ದಿನಗಳಲ್ಲಿ ಉಗ್ರ ಹೋರಾಟಕ್ಕೆ ಮುಂದಾಗುವ ಮುನ್ನ ಬಿಜೆಪಿ ನೇತೃತ್ವ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳನ್ನು ವಜಾ ಮಾಡಿ ಮಹಿಳೆಯರಿಗೆ ರಕ್ಷಣೆ ನೀಡಿ ವಿಶ್ವದಲ್ಲಿ ದೇಶದ ಹೆಸರು ಉಳಿಯುವಂತೆ ಕ್ರಮ ಜರುಗಿಸಿ ಎಂದು ಅಗ್ರಹಿಸಿದರು

ಸಂದರ್ಭದಲ್ಲಿ ಕರ್ನಾಟಕ ರೈತ ಸಂಘಟನೆಯ ರಾಜ್ಯ ಉಪಾಧ್ಯಕ್ಷರಾದ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ತಾಲ್ಲೂಕು ಅಧ್ಯಕ್ಷ ಮರ್ಲಹಳ್ಳಿ ರವಿಕುಮಾರ್ ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕರಾದ ನಾಗಭೂಷಣ ಜಿಲ್ಲಾ ಸಂಚಾಲಕರಾದ ಕೊಂಡಾಪುರ ಪರಮೇಶ್ವರಪ್ಪ ಮುಖಂಡರಾದ ಬಸವರಾಜಪ್ಪ ರಾಜಣ್ಣ ಮಂಜಣ್ಣ ಚಂದ್ರಣ್ಣ ತಿಪ್ಪೇಸ್ವಾಮಿ ಕನಕ ಶಿವಮೂರ್ತಿ ಓಬಣ್ಣ ನಾಗರಾಜ ಹನುಮಂತಪ್ಪ ಮುಂತಾದವರು ಉಪಸ್ಥಿತರಿದ್ದರು

ಫೋಟೋ :ಮೊಳಕಾಲ್ಮೂರು ಪಟ್ಟಣದ ತಾಲ್ಲೂಕ್ ಕಛೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ತಹಶೀಲ್ದಾರ್ ರವರಿಗೆ ಮನವಿ ಸಲ್ಲಿಸಿದರು.

# ಕೇಂದ್ರ ಸಚಿವ ನಿತಿನ್ ಗಡ್ಕರಿಯನ್ನು ಭೇಟಿಯಾದ ಸತೀಶ್ ಜಾರಕಿಹೊಳಿ

» ನವದೆಹಲಿ



ಕರ್ನಾಟಕ ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಿಗೆ ಸಂಬಂಧಿಸಿದ 20 ಯೋಜನೆಗಳಿಗೆ ಅನುಮೋದನೆ ನೀಡುವಂತೆ ಕೇಂದ್ರ ರಸ್ತೆ ಹಾಗೂ ಭೂ ಸಾರಿಗೆ ಇಲಾಖೆ ಸಚಿವ ನಿತಿನ್ ಗಡ್ಕರಿ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಭೇಟಿ ಬಳಿಕ ಮಾತನಾಡಿದ ಸತೀಶ್ ಜಾರಕಿಹೊಳಿ ಕಳೆದ ಹತ್ತು ವರ್ಷಗಳಿಂದ ಬಾಕಿ ಉಳಿದಿದ್ದ ಯೋಜನೆಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಗಿದೆ.

ರಾಯಚೂರು ರಿಂಗ್ ರಸ್ತೆ, ಬೆಂಗಳೂರು ರಿಂಗ್ ರೋಡ್, ಶಿರಾಡಿ ಘಾಟ್ ಸುರಂಗ ಮಾರ್ಗ ಸೇರಿದಂತೆ ಹಲವು ಯೋಜನೆಗಳಿಗೆ ಅನುಮೋದನೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಶಿರಾಡಿ ಘಾಟ್‌ನಲ್ಲಿ ಸುರಂಗ ನಿರ್ಮಾಣಕ್ಕೆ ಅರಣ್ಯ ಇಲಾಖೆ ಒಪ್ಪಿಗೆ ಸೂಚಿಸಿಲ್ಲ. ಇದರ ಹೊರತಾಗಿಯೂ ಕೇಂದ್ರ ಸರ್ಕಾರ ಹೆಚ್ಚಿನ ಆಸಕ್ತಿ ವಹಿಸಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಚ್ಚಿನ ರಾಷ್ಟ್ರೀಯ ಹೆದ್ದಾರಿಗಳ ಕಾಮಗಾರಿಗಳು ಬಾಕಿ ಉಳಿದಿವೆ. ಇದಕ್ಕೆ ಪರಿಹಾರ ಕಂಡುಕೊಳ್ಳುವ ಬಗ್ಗೆಯೂ ಮಾತನಾಡಲಾಗಿದೆ. ರಾಯಚೂರು, ಗದಗ ಹಾಗೂ ಶಿವಮೊಗ್ಗದಲ್ಲಿ ರಿಂಗ್ ರಸ್ತೆ, ಚಿಕ್ಕಬಳ್ಳಾಪುರ, ನವಲಗುಂದದಲ್ಲಿ ಬೈಪಾಸ್ ರಸ್ತೆ ಬೆಳಗಾವಿ–ಗೋಕಾಕ್ ನಡುವಿನ ಎಲಿವೇಟೆಡ್ ಕಾರಿಡಾರ್ ನಿರ್ಮಾಣಕ್ಕೆ ಸಹ ಒಪ್ಪಿಗೆ ನೀಡುವಂತೆ ಕೇಳಲಾಗಿದೆ. ಈ ಯೋಜನೆಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಜಿಎಸ್ ಟಿಯನ್ನು ಭರಿಸುವ ವಿಚಾರದಲ್ಲಿ ಸಹಕಾರ ನೀಡಲಿದ್ದೇವೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಸಭೆಯಲ್ಲಿ ಸಂಸದರಾದ ಬಿ.ವೈ.ರಾಘವೇಂದ್ರ, ಜಿ.ಎಂ. ಸಿದ್ದೇಶ್ವರ, ಜಿ.ಎಸ್. ಬಸವರಾಜು, ಉಮೇಶ್ ಜಾಧವ್ ಸೇರಿದಂತೆ ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ತಂಬಾಕು ಅಂಗಡಿಗಳಿಗೆ ದಾಳಿ: 57 ಪ್ರಕರಣ, ರೂ.5900 ದಂಡ ವಸೂಲಿ



» ಚಿತ್ರದುರ್ಗ

ಜಿಲ್ಲೆಯಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್, ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಎನ್.ಕಾಶೀ ಅವರ ಮಾರ್ಗದರ್ಶನದಲ್ಲಿ ಕೋಟ್ಪಾ–2003ರ ಕಾಯ್ದೆಯ ಕುರಿತು ಹೊಳಲ್ಕೆರೆ ಹಾಗೂ ಹೊಸದುರ್ಗ ನಗರ ಪ್ರದೇಶಗಳಲ್ಲಿ ಜಿಲ್ಲಾಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ದಾಳಿ ನಡೆಸಿ ದಂಡ ವಿಧಿಸಿದೆ.ತಂಬಾಕು ಮತ್ತು ಕೊರೋನಾ ಕುರಿತು ಸಾರ್ವಜನಿಕರಲ್ಲಿ ಮತ್ತು ಅಂಗಡಿ ಮಾಲೀಕರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ತಡೆಗಟ್ಟಲು ಜಾಗೃತಿ ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್–4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು ಮತ್ತು ಸೆಕ್ಷನ್–4 ಅಡಿಯಲ್ಲಿ 51 ಕೇಸುಗಳನ್ನು ದಾಖಲಿಸಿ ರೂ.5200 ದಂಡವನ್ನು, ಸೆಕ್ಷನ್–6ಎ ಅಡಿಯಲ್ಲಿ 3 ಕೇಸುಗಳನ್ನು ದಾಖಲಿಸಿ ರೂ. 400 ದಂಡವನ್ನು ಮತ್ತು ಸೆಕ್ಷನ್–6ಬಿ ಅಡಿಯಲ್ಲಿ 3 ಕೇಸುಗಳನ್ನು ದಾಖಲಿಸಿ ರೂ. 300 ದಂಡ ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ಜಿಲ್ಲಾಮಟ್ಟದ ತನಿಖಾ ತಂಡದ ಅಧಿಕಾರಿಗಳಾದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ. ಪ್ರಭುದೇವ್, ಸಮಾಜ ಕಾರ್ಯಕರ್ತ ಕೆ.ಎಂ. ತಿಪ್ಪೇಸ್ವಾಮಿ, ಸಿ.ವಿಶ್ವ, ರಂಗನಾಥ್, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿಯವರು ಭಾಗವಹಿಸಿದ್ದರು.

# ಆ.31 ರಿಂದ ಶಿವಮೊಗ್ಗ ಬೆಂಗಳೂರು ವಿಮಾನ ಹಾರಟ

» ಶಿವಮೊಗ್ಗ

ವಿಮಾನ ನಿಲ್ದಾಣದಿಂದ ವಿಮಾನ ಹಾರಾಟಕ್ಕೆ ಕೊನೆಗೂ ಮುಹೂರ್ತ ಫಿಕ್ಸ್ ಆಗಿದೆ. ಹೌದು, ಆ. 31 ರಿಂದ ಶಿವಮೊಗ್ಗ ಬೆಂಗಳೂರು ಮಧ್ಯೆ ವಿಮಾನ ಹಾರಾಟ ಆರಂಭವಾಗಲಿದೆ. ಇಂಡಿಗೋ ಏರ್ಲೈನ್ಸ್ ಸಂಸ್ಥೆ ತನ್ನ ಅಧಿಕೃತ ವೆಬ್ಸೈಟ್‌ನಲ್ಲಿ ಸೀಟ್ ಬುಕ್ಕಿಂಗ್ಗೆ ಇಂದಿನಿಂದಲೇ ಅವಕಾಶ ಕಲ್ಪಿಸಲಾಗಿದೆ.ಆ. 31ರಂದು ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಬೆಳಿಗ್ಗೆ 9.50 ಕ್ಕೆ ಹೊರಟು 11.05 ಶಿವಮೊಗ್ಗ ತಲುಪಲಿದೆ. ನಂತರ 11:25ಕ್ಕೆ ಶಿವಮೊಗ್ಗದಿಂದ ಹೊರಟು 12:25ಕ್ಕೆ ಬೆಂಗಳೂರು ತಲುಪಲಿದೆ. ಆ. 31ರಂದು ಪ್ರತಿ ಟಿಕೆಟ್ ದರ 6227 ರೂ ಇರಲಿದ್ದು ಸೆಪ್ಟೆಂಬರ್ 1ರಿಂದ ಟಿಕೆಟ್ ದರ 4000 ರೂ. ಇರಲಿದೆ.

ಸೆಪ್ಟೆಂಬರ್ ಒಂದರಿಂದ ಪ್ರತಿ ದಿನ ಇದೇ ವೇಳೆಯಲ್ಲಿ ವಿಮಾನ ಸಂಚಾರ ನಡೆಸಲಿದೆ. ಪ್ರಯಾಣಿಕರು ಕೊಂಡೊಯ್ಯುವ ಲಗೇಜ್ ತೂಕಕ್ಕೆ ವಿಮಾನದಲ್ಲಿ ಮಿತಿ ಇರಲಿದೆ. ಶಿವಮೊಗ್ಗ–ಬೆಂಗಳೂರು ವಿಮಾನದಲ್ಲಿ 15 ತೂಕದ ಲಗೇಜ್ ಕೊಂಡೊಯ್ಯಬಹುದು. ಪ್ರತಿ ಪ್ರಯಾಣಿಕ ಒಂದು ಹ್ಯಾಂಡ್ ಬ್ಯಾಗ್ ತೆಗೆದುಕೊಂಡು ಹೋಗಬಹುದು. ತೂಕ 7 ಕೆ.ಜಿ.ವರೆಗೂ ಇರಬಹುದು. ಸುತ್ತಳತೆ 115 ಸೆಂ.ಮೀ. ಮೀರುವಂತಿಲ್ಲ ಎಂದು ಷರತ್ತು ವಿಧಿಸಲಾಗಿದೆ.

ಇಂಡಿಗೋ ಸಂಸ್ಥೆಯ ಅಧಿಕೃತ ವೆಬ್ಸೈಟ್‌ನಲ್ಲಿ ಟಿಕೆಟ್ ಬುಕಿಂಗ್ ಮಾಡಬಹುದಾಗಿದೆ. ಶಿವಮೊಗ್ಗ–ಬೆಂಗಳೂರು ಮಧ್ಯೆ ವಿಮಾನ ಹಾರಾಟ ಯಾವಾಗ ಎಂಬ ಕುತೂಹಲವಿತ್ತು. ಇಂಡಿಗೋ ಸಂಸ್ಥೆ ಟಿಕೆಟ್ ಬುಕಿಂಗ್ ಆರಂಭಿಸಿದ್ದು ಇದರಿಂದ ಶಿವಮೊಗ್ಗ ವಿಮಾನ ನಿಲ್ದಾಣದ ಕುರಿತ ನಿರೀಕ್ಷೆ ಹೆಚ್ಚಾಗಿದೆ.

# ಹುಲಿಗಳ ಸಂಖ್ಯೆಯಲ್ಲಿ ಹೆಚ್ಚಳ: ಖಂಡ್ರೆ

» ಮೊದಲ ಪುಟದಿಂದ

ಈ ಗಣತಿಗೆ ಕ್ಯಾಮರಾ ಟ್ರಾಕ್ ಮತ್ತು ಲೈನ್ ಟ್ರಾನ್ಸ್ಯಾಕ್ಟ್ ವಿಧಾನ ಬಳಸಲಾಗಿದೆ ಎಂದರು.ರಾಜ್ಯದ ಎಲ್ಲ ಸಂರಕ್ಷಿತರಣ್ಯಗಳಲ್ಲಿ ಅಳವಡಿಸಲಾಗಿದ್ದ 5399 ಕ್ಯಾಮರಾ ಟ್ರಾಕ್‌ನಲ್ಲಿ 66 ಲಕ್ಷಕ್ಕೂ ಹೆಚ್ಚು ವನ್ಯಜೀವಿಗಳ ಛಾಯಾಚಿತ್ರ ಕ್ರೂಢೀಕರಣವಾಗಿದ್ದು, ಹುಲಿಗಳ ಚಲನ–ವಲನ ಟೆರಿಟೆರಿ ಹುಲಿಗಳ ಮೈಮೇಲಿನ ಪಟ್ಟೆಗಳ ಆಧಾರದ ಮೇಲೆ ಹುಲಿ ಸಂಖ್ಯೆಯನ್ನು ಲೆಕ್ಕ ಹಾಕಲಾಗಿದೆ ಎಂದು ವಿವರ ನೀಡಿದರು.

## ಪ್ರಮುಖ ಸುದ್ದಿ

# ಮಹಿಳಾ ನಿಲಯದ ಯುವತಿಯರಿಗೆ ಕಂಕಣ ಭಾಗ್ಯ

» ದಾವಣಗೆರೆ



ಸಂಪ್ರದಾಯವನ್ನು ಕೈಬಿಟ್ಟು ರಾಷ್ಟ್ರಕವಿ ಕುವೆಂಪುರವರ ಮಂತ್ರ ಮಾಂಗಲ್ಯ ಧಾರಣೆಯಂತೆ ಜಾತಿ, ಕುಲ, ಮತಗಳೆನ್ನದೇ ಮಹಿಳಾ ನಿಲಯದ ಯುವತಿಯರ ವಿವಾಹವನ್ನು ನೆರವೇರಿಸಲಾಗಿದೆ ಎಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಧಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ ಹೇಳಿದರು.

ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ದಾವಣಗೆರೆ ಇವರ ಸಹಯೋಗದಲ್ಲಿ ನಗರದಲ್ಲಿನ ಇಂಡಸ್ಟ್ರಿಯಲ್ ಏರಿಯಾ ಶ್ರೀರಾಮನಗದಲ್ಲಿರುವ ರಾಜ್ಯ ಮಹಿಳಾ ನಿಲಯದಲ್ಲಿ ಜರುಗಿದ ವಿವಾಹ ಮಹೋತ್ಸವದಲ್ಲಿ ಜಿಲ್ಲಾಧಿಕಾರಿ ಶಿವಾನಂದ ಕಾಪಶಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ; ಅರುಣ್.ಕೆ ಆಗಮಿಸಿ ವಧುವರರಿಗೆ ಆಶೀರ್ವದಿಸಿದರು.

ಜುಲೈ 26 ರಂದು ರಾಜ್ಯ ಮಹಿಳಾ ನಿಲಯದಲ್ಲಿ 9 ವರ್ಷಗಳ ಕಾಲ ಆಶ್ರಯ ಪಡೆದ ರಮ್ಯ(30 ವರ್ಷ} ಮತ್ತು ವಿನೋಧ (34 ವರ್ಷ) ಎಂಬ ಇಬ್ಬರು ಯುವತಿಯರಿಗೆ ವಿಶೇಷ ರೀತಿಯಲ್ಲಿ ಸಾಂಪ್ರದಾಯವನ್ನು ಕೈಬಿಟ್ಟು, ಪುರೋಹಿತರನ್ನು ಕರೆಸದೇ ಸರಳ ವಿಧಾನದಲ್ಲಿ ವಿವಾಹ ಮಹೋತ್ಸವವನ್ನು ನೆರವೇರಿಸಲಾಯಿತು. ಆಶ್ರಿತರು ತಮ್ಮ ಜೀವನದಲ್ಲಿಸಾಕಷ್ಟುಸಂಕಷ್ಟಗಳಿಗೆಒಳಗಾಗಿ ನಮ್ಮ ಸಂಸ್ಥೆಗೆ ಬಂದು ಸಣ್ಣ ಪುಟ್ಟ ತರಬೇತಿ ಪಡೆದು ಸ್ವಾವಲಂಬಿಗಳಾಗಿದ್ದಾರೆ.

ಇಬ್ಬರೂ ಮಹಿಳೆಯರು ಸ್ವ–ಇಚ್ಛೆಯಿಂದ ಸಂಸ್ಥೆಯಿಂದಲೇ ವಿವಾಹವಾಗಿ ಬಿಡುಗಡೆಯಾಗಲು ಒಪ್ಪಿದ್ದರಿಂದ ಪೊಲೀಸ್ ವಿಚಾರಣೆ ಮೂಲಕ ವರರ ವ್ಯಕ್ತಿತ್ವ ಹಾಗೂ ಸ್ಥಳ ಪರಿಶೀಲನೆ ನಡೆಸಿದ ನಂತರ ವಿವಾಹದ ಮಾಹಿತಿಯನ್ನು ಇಲಾಖಾ ನಿರ್ದೇಶಕರಿಗೆ ರವಾನಿಸಿ ಅವರ ಅನುಮೋದನೆ ಹಾಗೂ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆದು ವಿವಾಹವನ್ನು ಏರ್ಪಡಿಸಲಾಗಿದೆ ಎಂದರು.

ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ಸಮೀಪದ ಉಂಬಳಮನೆಯ ನಿವಾಸಿ ನಾಗರಾಜ ಪರಮೇಶ್ವರ ಹೆಗಡೆ ಎಂಬುವವರು ಸಂಸ್ಥೆಯ ನಿವಾಸಿ ರಮ್ಯಳನ್ನು ವರಿಸಿದರು. ಇವರು ಸ್ವಂತ ಅಡಿಕೆ ತೋಟದ ಕೃಷಿ ಚಟುವಟಿಕೆಯಲ್ಲಿ ಕಾರ್ಯ ನಿರ್ವಹಿಸುವುದರ ಜೊತೆಗೆ ಕ್ಯಾಟರಿಂಗ್ ಕೆಲಸ ಮಾಡುತ್ತಾರೆ.

ಅದೇ ರೀತಿಯಾಗಿ ಸಂಸ್ಥೆಯ ನಿವಾಸಿ ವಿನೋಧಳನ್ನು ಹರಿಹರ ತಾಲ್ಲೂಕಿನ ದೇವರಬೆಳಕೆರೆ ಗ್ರಾಮದ ನಿವಾಸಿ ಮಲ್ಲಿಕಾರ್ಜುನ ಯು.ಎಂ ವರಿಸಿದರು. ಇವರು ತಮ್ಮದೇ ಆದ ವ್ಯವಸಾಯ ಭೂಮಿಯನ್ನು ಹೊಂದಿದ್ದು, ಆರ್ಥಿಕವಾಗಿ ಸಧೃಡವಾಗಿರುತ್ತಾರೆ.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ.ಕೆ ಪ್ರಕಾಶ್, ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಸೌಮ್ಯ ಶ್ರೀ, ರಾಜ್ಯ ಮಹಿಳಾ ನಿಲಯ, ದಾವಣಗೆರೆ ಅಧೀಕ್ಷಕರಾದ ಶ್ರೀಮತಿ ಶಕುಂತಲಾ ಬಿ ಕೋಳೂರ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಆ.16 ರೊಳಗೆ ಬೆಳೆ ವಿಮೆಗೆ ನೋಂದಣಿ ಮಾಡಿ: ಈಶ ಮಾಹಿತಿ

» ಹೊಸದುರ್ಗ



ತಾಲೂಕಿನಲ್ಲಿ 2023– 24 ನೇ ಸಾಲಿನ ಮುಂಗಾರು ಹಂಗಾಮಗಳಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚನೆ ಹೊರಡಿಸಲಾಗಿದೆ. ರೈತ ಬಾಂಧವರು ಮುಂಬರುವ ಆಗಸ್ಟ್ ತಿಂಗಳ 16 ರೊಳಗೆ ಬೆಳೆ ವಿಮೆಗೆ ನೋಂದಣಿ ಮಾಡಿಕೊಳ್ಳಿ ಎಂದು ಸಹಾಯಕ ಕೃಷಿ ನಿರ್ದೇಶಕ ಈಶ ಮಾಹಿತಿ ನೀಡಿದರು. ಪಟ್ಟಣದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಬುಧವಾರ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯ ಕುರಿತಂತೆ ಮಾತನಾಡಿದ ಅವರು, ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ಆಸಕ್ತ ರೈತರು ಬೆಳೆ ವಿಮೆಗೆ ನೋಂದಣಿ ಮಾಡಲು ಹತ್ತಿ, ಶೇಂಗಾ, ಹುರುಳಿ, ಮೆಕ್ಕೆಜೋಳ, ಈರುಳ್ಳಿ, ತೊಗರಿ, ಕೆಂಪು ಮೆಣಸಿನಕಾಯಿ, ಸಾವೆ, ಎಳ್ಳು, ಜೋಳ, ಸೂರ್ಯಕಾಂತಿ, ಟೊಮೋಟೊ, ಬೆಳೆಗಳಿಗೆ ಇದೇ ಜು.31 ರಂದು ಹಾಗೂ ನವಣೆ, ಭತ್ತ ಮತ್ತು ರಾಗಿ ಬೆಳೆಗಳಿಗೆ ಮುಂಬರುವ ಆಗಸ್ಟ್ 16 ರಂದು ಕೊನೆಯ ದಿನಾಂಕವಾಗಿರುತ್ತದೆ ಹೇಳಿದರು. ಆಸಕ್ತ ರೈತರು ನಿಗದಿತ ದಿನಾಂಕದೊಳಗೆ ಬೆಳೆ ವಿಮೆಗೆ ನೋಂದಣಿಮಾಡಬೇಕೆಂದುವಿನಂತಿಸಿಕೊಳ್ಳುತ್ತೇನೆ. ಅಂತಿಮ ಸಮಯದಲ್ಲಿ ಜನದಟ್ಟಣೆಯಿಂದಾಗಿ ನೋಂದಣಿಯಲ್ಲಿ ತಪ್ಪುಗಳು ಸಂಭವಿಸಿ, ವಿಮೆ ಪರಿಹಾರ ಬಾರದಿರುವ ಸಂಭವವಿರುತ್ತದೆ. ಇದಕ್ಕೆ ಅವಕಾಶ ಕೊಡದೆ ಸಕಾಲದಲ್ಲಿ ನೋಂದಣಿ ಮಾಡಿ ಎಂದು ಹೇಳಿದ್ದಾರೆ.

### ಥೈಲ್ಯಾಂಡ್‌ನ ನ್ಯಾಷನಲ್ ಕ್ಲಬ್‌ನಲ್ಲಿ ಪ್ರಗತಿಪರ ರೈತ ದಯಾನಂದಮೂರ್ತಿ, ಶಿಕ್ಷಕಿ ಶಾರದಮ್ಮನವರಿಗೆ ಅಭಿನಂದನೆ



» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಕೃಷಿ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದ ಪ್ರಗತಿಪರ ರೈತ ಆರ್ .ಎ.ದಯಾನಂದಮೂರ್ತಿಯವರಿಗೆ ಥೈಲ್ಯಾಂಡ್‌ನ ಇಂಟರ್ ನ್ಯಾಷನಲ್ ಅಚಿವರ್ಸ್ ಕ್ಲಬ್ ವತಿಯಿಂದ ಇತ್ತೀಚಿಗಷ್ಟೇ ಎರಡನೇ ಬಾರಿಗೆ ಡಾಕ್ಟರೇಟ್ ಪದವಿಯನ್ನು ಪ್ರಧಾನ ಮಾಡಲಾಯಿತು. ಇದೇ ಸಂದರ್ಭದಲ್ಲಿ ದಯಾನಂದರವರ ಪತ್ನಿ ಶಿಕ್ಷಕಿ ಟಿ.ಶಾರದಮ್ಮ ಸಹ ಕಳೆದ ಸುಮಾರು 30 ವರ್ಷಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದು, ಸಾವಿರಾರು ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡಿದ ಹಿನ್ನೆಲೆಯಲ್ಲಿ ಇದೇ ಸಂಸ್ಥೆಯವರು ಟಿ.ಶಾರದಮ್ಮರವರನ್ನು ಅಭಿನಂದಿಸಿದ್ದಾರೆ.

### ಇಂದು ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರ ಹಾಗೂ ಮೇಲ್ಮಹಡಿ ಕಟ್ಟಡದ ಉದ್ಘಾಟನಾ ಸಮಾರಂಭ

» ಚಿತ್ರದುರ್ಗ

ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಚೋಳಗಟ್ಟ ಗ್ರಾಮ ಪಂಚಾಯಿತಿ ವತಿಯಿಂದ ಇದೇ ಜುಲೈ 28ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ ನಂ.13ಕ್ಕೆ ಹೊಂದಿಕೊಂಡಂತೆ ಕಿರುಬನಕಲ್ಲು ಗ್ರಾಮದ ಗ್ಯಾಸ್ ಗೋಡಾನ್ ಪಕ್ಕದಲ್ಲಿ ಚೋಳಗಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರ ಹಾಗೂ ಮೇಲ್ಮಹಡಿ ಕಟ್ಟಡದ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಸಚಿವ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಚೋಳಗಟ್ಟ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜುಳ ಪರಮೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ವೈ.ಎ. ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಚೋಳಗಟ್ಟ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಶಾರದಮ್ಮ ಅಂಜಿನಮೂರ್ತಿ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಪ್ರಭಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿವ್ಯಪ್ರಭು ಜಿಆರ್‌ಜೆ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಮಣಿಪುರ ಘಟನೆ ಖಂಡಿಸಿ ಪ್ರತಿಭಟನೆ

» ಚಿತ್ರದುರ್ಗ



ಮಣಿಪುರದಲ್ಲಿ ನಡೆಯುತ್ತಿರುವ ಹಿಂಸಾಚಾರವನ್ನು ಖಂಡಿಸಿ ಕಾನೂನು ಕ್ರಮ ಜರುಗಿಸಲು ಕೋರಿ ಬಹುಜನ ಸಮಾಜ ಪಾರ್ಟಿ ಜಿಲ್ಲಾ ಸಮಿತಿ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಮಾಡಿದೆ.

ಮಣಿಪುರದಲ್ಲಿ ಕುಕಿ ಜನಾಂಗದ ಇಬ್ಬರು ಮಹಿಳೆಯರನ್ನು ಬೆತ್ತಲೆಗೊಳಿಸಿ ನಡುಬೀದಿಯಲ್ಲಿ ಮೆರವಣಿಗೆ ಮಾಡಿ ನಾನಾ ರೀತಿ ಚಿತ್ರಹಿಂಸೆ ನೀಡುತ್ತಾ ಅವರ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ ಕೊಲೆ ಮಾಡಿದ ಘಟನೆಯಲ್ಲಿ ಇಡಿ ದೇಶವೆ ತಲೆತಗ್ಗಿಸುವಂತಹ ಅಮಾನುಷ ಕೃತ್ಯವಾಗಿದೆ. ಈ ದೌರ್ಜನ್ಯವನ್ನು ತಡೆಗಟ್ಟಲು ಪ್ರಯತ್ನಿಸಿದ ಸಂತ್ರಸ್ತೆ ಮಹಿಳೆಯ ತಮ್ಮನನ್ನು ಈ ಕಿರಾತಕರು ಕೊಲೆ ಮಾಡಿರುವುದಾಗಿ ವರದಿಯಾಗಿದೆ. ಈ ದೌರ್ಜನ್ಯವನ್ನು ಕರ್ನಾಟಕ ಬಹುಜನ ಸಮಾಜ ಪಾರ್ಟಿ ತೀವ್ರವಾಗಿ ಖಂಡಿಸುತ್ತದೆ.

ಇತ್ತೀಚ್ಚಿಗೆ ಮೈತೇಯಿ ಸಮಾಜವನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಿರುವ ಬಗ್ಗೆ ಉಚ್ಚನ್ಯಾಯಾಲದ ತೀರ್ಪು ಬಂದ ಮೇಲೆ ಹಿಂಸಾಚಾರವು ಹೆಚ್ಚಾಯಿತೆಂದು ಹೇಳಬಹುದು. ರಾಜಕೀಯವಾಗಿ ಬಲಿಷ್ಠರಾದ ಮತ್ತು ಜನಸಂಖ್ಯೆಯಲ್ಲಿ ಹೆಚ್ಚಾಗಿರುವ ಮೈತೇಯಿ ಸಮಾಜಕ್ಕೆ ಮೀಸಲಾತಿ ಬಲಸಿಕ್ಕಿದ್ದು ಹಿಂಸಾಚಾರಕ್ಕೆ ಕಾರಣವಾಗಿರಬಹುದು. ಈ ಅಮಾನುಷ ಘಟನೆಯಲ್ಲಿ ಸುಮಾರು 200 ಜನಕ್ಕೂ ಮೇಲ್ಪಟ್ಟು ದೌರ್ಜನ್ಯ ಕೋರರು ಬಾಗಿಯಾಗಿದ್ದು ಅವರನ್ನು ಕೂಡಲೆ ಬಂಧಿಸಿ ಕಠಿಣ ಶಿಕ್ಷೆಗೆ ಗುರಿ ಪಡಿಸಬೇಕೆಂದು ಬಿಎಸ್‌ಪಿ ಒತ್ತಾಯಿಸುತ್ತದೆ

ಮಣಿಪುರದಲ್ಲಿ ಬಿ.ಜೆ.ಪಿ ಸರ್ಕಾರ ಅಸ್ತಿತ್ವದಲ್ಲಿದ್ದು ಬಿರೆನ್ ಸಿಂಗ್ ಮುಖ್ಯಮಂತ್ರಿಯಾಗಿದ್ದಾರೆ. ಚುನಾವಣೆ ವೇಳೆ ಡಬಲ್ ಇಂಜಿನ್ ಸರ್ಕಾರಕ್ಕೆ ಮತ ನೀಡುವಂತೆ ಪ್ರಧಾನಮಂತ್ರಿಯಾಗಿ ಅಬ್ಬರದ ಪ್ರಚಾರ ಮಾಡಿ ಅಧಿಕಾರಕ್ಕೆ ಬಂದ ಮೇಲೆ ಮೇಲ್ಕಂಡ ರೀತಿಯಲ್ಲಿ ಕುಕಿ ಸಮುದಾಯದ ವಿರುದ್ದ ಹಿಂಸಾಚಾರ ನಿಲ್ಲಿಸದೇ ಮೈತೇಯಿ ಸಮುದಾಯದ ಪರವಾಗಿ ಪಕ್ಷ ಪಾತದಿಂದ ಮುಖ್ಯಮಂತ್ರಿ ಕಾರ್ಯನಿರ್ವಹಿಸುತ್ತಿದ್ದಾರೆ. ಬೇರೆ ರಾಜ್ಯಗಳಲ್ಲಿ ಇಂತಹ ಅತ್ಯಾಚಾರಗಳು ನೂರಾರು ಕೊಲೆಗಳು ನಡೆದಿಲ್ಲವೆ. ಎಂದು ಹೇಳುವ ಮೂಲಕ ಈ ಘಟನೆಯನ್ನು ಮುಖ್ಯಮಂತ್ರಿಸಮರ್ಥಿಸಿಕೊಂಡಿರುವುದು. ಖಂಡನಿಯ

ಮಣಿಪುರ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಿರೆನ್ ಸಿಂಗ್ ರಾಜೀನಾಮೆಗೆ ಒತ್ತಾಯಿಸುತ್ತೇವೆ. ಇವರು ರಾಜ್ಯವನ್ನು ಕೊಡದಿದ್ದರೆ ರಾಜ್ಯಪಾಲರು ಇವರನ್ನು ಮುಖ್ಯಮಂತ್ರಿ ಪದವಿಯಿಂದ ವಜಾಗೊಳಿಸುವಂತೆ ಒತ್ತಾಯಿಸುತ್ತೇವೆ. ಇಷ್ಟೆಲ್ಲ ಅಮಾನುಷ ಕೃತ್ಯಗಳು ಕಳೆದ 80 ದಿನಗಳಿಂದ ನಡೆಯುತ್ತಿದ್ದರೂ ಸಹ ಪ್ರಧಾನಮಂತ್ರಿ ನರೇಂದ್ರಮೋದಿಯವರು ನಮಗೂ ಇದಕ್ಕೂ ಸಂಬಂಧವಿಲ್ಲವೆಂಬಂತೆ ಕಣ್ಣುಮುಚ್ಚಿ ಕುಳಿತಿರುವುದು ನಾಚಿಕೆಗೇಡಿನ ಸಂಗತಿ. ಈ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿಯವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಬಿ.ಎಸ್.ಪಿ ಒತ್ತಾಯಿಸುತ್ತದೆ.

ಈ ಕುರಿತು ರಾಷ್ಟ್ರಪತಿಗಳು ಮಣಿಪುರ ರಾಜ್ಯದ ಜನರ ಪ್ರಾಣ ಮತ್ತು ಆಸ್ತಪಾಸ್ತಿ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮನವಿ ಮಾಡಲಾಯಿತು. ಈ ಪ್ರತಿಭಟನೆಯಲ್ಲಿ ಜಿಲ್ಲಾ ಸಮಿತಿಯ ಜಿಲ್ಲಾ ಸಂಯೋಜಕರಾದ ಕೆ.ಎನ್.ದೊಡ್ಡೆಟ್ಟೆಪ್ಪ, ಶಿವಮೂರ್ತಿ, ಜಿಲ್ಲಾಧ್ಯಕ್ಷರಾದ ಎನ್.ಪ್ರಕಾಶ್, ಜಿಲ್ಲಾ ಪ್ರಧಾನಕಾರ್ಯದರ್ಶಿ ಹನುಮಂತರಾಯ, ಉಪಾಧ್ಯಕ್ಷ ರಾಮಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಶ್ರೀನಿವಾಸ್ ಸೇರಿದಂತೆ ತಾಲ್ಲೂಕು ಪದಾದಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು,.

# ನೇತ್ರ ಜ್ಯೋತಿ ಕಾಲೇಜಿನ ಘಟನೆ ಖಂಡನೆ, ತಪ್ಪಿತಸ್ಥರ ಮೇಲೆ ಕಠಿಣ ಕ್ರಮಕ್ಕೆ ಒತ್ತಾಯ

» ಚಿತ್ರದುರ್ಗ



ನೇತ್ರ ಜ್ಯೋತಿ ಕಾಲೇಜಿನ 3 ವಿದ್ಯಾರ್ಥಿನಿಯರ ಮೇಲೆ ಕಠಿಣ ಕ್ರಮ ತೆಗೆದುಕೊಂಡು ಈ ಕುರಿತು ಜಿಲ್ಲಾಡಳಿತ ಸೂಕ್ತ ರೀತಿಯ ತನಿಖೆಯನ್ನು ನಡೆಸಿ ತಪ್ಪಿತಸ್ಥರ ಮೇಲೆ ಕಾನೂನಾತ್ಮಕ ಕಠಿಣ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಎಬಿವಿಪಿ ಈ ಮೂಲಕ ಆಗ್ರಹಿಸಿದೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆಯನ್ನು ನಡೆಸಿದ ಪದಾಧಿಕಾರಿಗಳು, ಈಗಾಗಲೇ ರಾಜ್ಯಾದ್ಯಂತ ಸಾಮಾಜಿಕ ಜಾಲತಾಣಗಳಲ್ಲಿ ಉಡುಪಿಯ ನೇತ್ರ ಜ್ಯೋತಿ ಕಾಲೇಜಿನಲ್ಲಿ ಹಿಂದೂ ಯುವತಿಯರು ಶೌಚಾಲಯವನ್ನು ಬಳಸುವ ವೀಡಿಯೋವನ್ನು ಮುಸ್ಲಿಂ ಯುವತಿಯರಾದ ಶಬನಾಜ್, ಅಲ್ಪಿಯಾ ಮತ್ತು ಅಲಿಮಾತುಲ್ ಶಾಫಿಯಾ ಇವರುಗಳು ಮಾಡಿ ಅದನ್ನು ತಮ್ಮ ಕೋಮಿನವರೊಂದಿಗೆ ಹಂಚಿಕೊಂಡು ಹಿಂದೂ ವಿದ್ಯಾರ್ಥಿನಿಯರನ್ನು ಜಿಹಾದ್ ಬಲೆಗೆ ಸಿಕ್ಕಿಸುವ ಆತಂಕಕಾರಿ ಘಟನೆ ಸದ್ದು ಮಾಡುತ್ತಿದೆ ಎಂದು ದೂರಿದ್ದಾರೆ.

ಘಟನೆಯ ಸೂಕ್ಷ್ಮತೆ ಮತ್ತು ಗಂಭೀರತೆಯನ್ನು ಗಮನಿಸಿ ಇಂತಹ ಘಟನೆಯು ಇತರೆ ಕಾಲೇಜಿನಲ್ಲಿ ಮರುಕಳಿಸದಂತೆ ಇದಕ್ಕಾಗಿ ಜಿಲ್ಲೆಯ ಪ್ರತೀ ಕಾಲೇಜಿನಲ್ಲೂ ಈ ಕುರಿತು ಅರಿವು ಮೂಡಿಸುವುದು ಮತ್ತು ಇಂತಹ ಘಟನೆಯನ್ನು ವರದಿ ಮಾಡಲು ಪ್ರತೀ ಕಾಲೇಜಿನಲ್ಲೂ ಒಂದು ವಿಶೇಷ ಸೆಟ್ ಮಾಡುವಂತೆ ರಾಜ್ಯ ಸರ್ಕಾರ ನೋಡಿಕೊಳ್ಳಬೇಕು ಮತ್ತು ಇದನ್ನು ಗಮನಿಸಲು ಜಿಲ್ಲಾ ಮಟ್ಟದ ಒಂದು ತಂಡವನ್ನು ಸಹ ರಚಿಸಬೇಕು ಎಂದು ಎಬಿವಿಪಿ ಆಗ್ರಹಿಸುತ್ತದೆ.

ಈಗಾಗಲೇ ಮಾಧ್ಯಮಗಳಲ್ಲಿ ಬಂದಂತೆ ತಮಾಷೆಗಾಗಿ ಶೌಚಾಲಯದಲ್ಲಿ ವಿಡಿಯೋ ಚಿತ್ರೀಕರಣ ಮಾಡಿದ್ದೇವೆ ಎಂಬುದು ತೀರ ಬಾಲಿಷ ಹಾಗೂ ಪ್ರಕರಣವನ್ನು ದಾರಿ ತಪ್ಪಿಸುವ ಹೇಳಿಕೆ ಶೌಚ ಕ್ರಿಯೆ ಮಾಡುವಂತ ಖಾಸಗಿ ಜಾಗದಲ್ಲಿ ವಿಡಿಯೋ ಚಿತ್ರೀಕರಣ ಮಾಡುವಂತ ಹೇಯ ಕೃತ್ಯದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ವಿರುದ್ಧ ಪೊಲೀಸ್ ಇಲಾಖೆ ಯಾವುದೇ ಒತ್ತಡಕ್ಕೆ ಒಳಗಾಗದೆ ಸತ್ಯಾಸತ್ಯತೆಯನ್ನು ಪರಿಶೀಲಿಸಿ ಕ್ರಮ ತೆಗೆದುಕೊಂಡು ಇದರ ಹಿಂದಿರುವಂತ ಷಡ್ಯಂತ್ರವನ್ನು ಬಯಲಿಗೆಳೆಯಬೇಕು. ಪ್ರಕರಣದ ಹಿಂದೆ ಬಲವಾದ ಜಿಹಾದಿ ಜಾಲವೊಂದು ಕೆಲಸ ಮಾಡಿರುವುದರ ಕುರಿತು ಯಾವ ಸಂಶಯವೂ ಇಲ್ಲ. ಹಾಗಾಗಿ ಈ ಪ್ರಕರಣವನ್ನು ಇಲಾಖೆ ಸಮರ್ಥವಾಗಿ ಭೇದಿಸಿ ಇದರ ಹಿಂದಿರುವ ಜಾಲವನ್ನು ಬಯಲಿಗೆಳೆಯಬೇಕೆಂಬುದು ಪರಿಷತ್ತಿನ ಒಕ್ಕೊರಲ ಬೇಡಿಕೆಯಾಗಿದೆ ಎಂದಿದ್ದು ಈ ಕುರಿತು ಜಿಲ್ಲಾಡಳಿತ ಸೂಕ್ತ ರೀತಿಯ ತನಿಖೆಯನ್ನು ನಡೆಸಿ ತಪ್ಪಿತಸ್ಥರ ಮೇಲೆ ಕಾನೂನಾತ್ಮಕ ಕಠಿಣ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಎಬಿವಿಪಿ ಆಗ್ರಹಿಸಿದೆ.

ಈ ಸಂದರ್ಭದಲ್ಲಿ ಸುದರ್ಶನ್ ನಾಯ್ಕ್.ಎಸ್ ರಾಜ್ಯ ಕಾರ್ಯಕಾರಣಿ ಸದಸ್ಯರು, ಕನಕರಾಜ್ ತಾ. ಸಂಚಾಲಕರು, ಮನೋಜ್ ಹಾಸ್ಟೆಲ್ ಪ್ರಮುಖ್, ದಯಾನಂದ್ ನಗರ ಕಾರ್ಯಕಾರಣಿ, ಚೈತ್ರ ವಿದ್ಯಾರ್ಥಿನಿ ಪ್ರಮುಖ್, ಪೂರ್ಣಿಮ, ಸುಮನ್ ಮುಂತಾದವರು ಉಪಸ್ಥಿತರಿದ್ದರು.

### ರಾಜ್ಯದ ತಿರುಪತಿ ಭಕ್ತರಿಗೆ ಸಿಹಿ ಸುದ್ದಿ ನೀಡಿದ ಸಚಿವ ರಾಮಲಿಂಗರೆಡ್ಡಿ

» ಬೆಂಗಳೂರು

ರಾಜ್ಯದಲ್ಲಿರುವ ತಿರುಪತಿ ತಿಮ್ಮಪ್ಪನ ಭಕ್ತರಿಗೆ ಗುಡ್ ನ್ಯೂಸ್ ಎನ್ನುವಂತೆ, ಡಿಸೆಂಬರ್ ವೇಳೆಗೆ ತಿರುಮಲದಲ್ಲಿನ ವಸತಿಗೃಹ, ಕಲ್ಯಾಣ ಮಂಟಪ ಕಾಮಗಾರಿ ಪೂರ್ಣಗೊಳ್ಳಲಿದ್ದು, ಭಕ್ತರ ಬಳಕೆಗೆ ಮುಕ್ತವಾಗಲಿದೆ. ತಿರುಮಲಕ್ಕೆ ಭೇಟಿ ನೀಡಿದ್ದ ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗ ರೆಡ್ಡಿ, ಮುಜರಾಯಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟೇರಿಯ ಹಾಗೂ ಆಯುಕ್ತರಾದ ಬಸವರಾಜೇಂದ್ರ ಕರ್ನಾಟಕದ ಯಾತ್ರಿಗಳಿಗೆ ನಿರ್ಮಿಸುತ್ತಿರುವ ವಸತಿಗೃಹ ಹಾಗೂ ಕಲ್ಯಾಣ ಮಂಟಪದ ಕಾಮಗಾರಿಯನ್ನು ಪರಿಶೀಲಿಸಿದರು.ಈ ವೇಳೆ ತಿರುಮಲದಲ್ಲಿ ನಡೆಯುತ್ತಿರುವ ರಾಜ್ಯದ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಪರಿಶೀಲನಾ ಸಭೆ ನಡೆಸಲಾಯಿತು. ಈ ಸಂದರ್ಭದಲ್ಲಿ ಟಿಟಿಡಿಯ ಅಧಿಕಾರಿ ಧರ್ಮೇಂದ್ರ ರೆಡ್ಡಿ ಪಾಲ್ಗೊಂಡಿದ್ದರು. 220 ಕೋಟಿ ರೂ. ವೆಚ್ಚದಲ್ಲಿ ವಸತಿಗೃಹ, ಕಲ್ಯಾಣ ಮಂಟಪ ಸಿದ್ಧವಾಗುತ್ತಿದೆ. ಇದೇ ವರ್ಷದ ಡಿಸೆಂಬರ್ ಅಂತ್ಯದೊಳಗೆ 384 ಕೊಠಡಿಯ ವಸತಿಗೃಹ ಹಾಗೂ ಕಲ್ಯಾಣ ಮಂಟಪದ ಕಾಮಗಾರಿ ಪೂರ್ಣವಾಗಲಿದೆ ಎಂಬ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡಿದರು.ಆದಷ್ಟು ಬೇಗ ಕೆಲಸವನ್ನು ಅಚ್ಚುಕಟ್ಟಾಗಿ ಮುಗಿಸುವಂತೆ ಸಚಿವ ರಾಮಲಿಂಗಾರೆಡ್ಡಿ ಸೂಚಿಸಿದರು. ಅಲ್ಲದೇ ಭಕ್ತರ ಬಳಕೆಗೆ ಶೀಘ್ರವೇ ವಸತಿಗೃಹ ಮತ್ತು ಕಲ್ಯಾಣ ಮಂಟಪ ಸಿಗುವಂತೆ ಆಗಲಿ ಎಂದರು.

### ಆ.1ರಂದು ತರಬೇತಿ ಕಾರ್ಯಾಗಾರ

» ಚಿತ್ರದುರ್ಗ

ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಎಚ್.ಸಿ.ಎಲ್. ಟೆಕ್ ಬೀ ಕಂಪನಿ ಇವರ ಸಹಯೋಗದೊಂದಿಗೆ ಆಗಸ್ಟ್ 1ರಂದು ಬೆಳಿಗ್ಗೆ 9.30ಕ್ಕೆ ಚಿತ್ರದುರ್ಗ ಕೋಟೆ ಮುಂಭಾಗದ ಮಹಾರಾಣಿ ಪದವಿ ಪೂರ್ವ ಕಾಲೇಜಿನಲ್ಲಿ ವೃತ್ತಿ ತರಬೇತಿ ಕಾರ್ಯಗಾರ ಏರ್ಪಡಿಸಲಾಗಿದೆ. ಈ ಕಾರ್ಯಾಗಾರವು ಒಂದು ಉತ್ತಮವಾದ ಉದ್ದೇಶವನ್ನು ಹೊಂದಿದ್ದು, ಅರ್ಹ ಅಭ್ಯರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 8217478207, 8722790340, 9845454471 ಹಾಗೂ 9008591970 ಸಂಪರ್ಕಿಸಬಹುದು.

## ಪ್ರಮುಖ ಸುದ್ದಿ

# ಹೆಣ್ಣುಮಕ್ಕಳಿಗೆ ರಕ್ಷಣೆ ಕೊಡುವಂತೆ ಆಗ್ರಹಿಸಿ ಪ್ರತಿಭಟನೆ

» ಚಿತ್ರದುರ್ಗ




ರಾಜ್ಯದಲ್ಲಿ ಹಾಗೂ ದೇಶದಲ್ಲಿ ಹೆಣ್ಣುಮಕ್ಕಳ ಮೇಲೆ ನಡೆಯುತಿರುವ ದೌರ್ಜನ್ಯವನ್ನು ಖಂಡಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಇಂದು ಪ್ರತಿಭಟನೆ ಮಾಡುವ ಮೂಲಕ ಜಿಲ್ಲಾಧಿಕಾರಿಗಳ ಮುಖಾಂತರ ರಾಷ್ಟ್ರಪತಿ ಮತ್ತು ರಾಜ್ಯಪಾಲರಿಗೆ ಮನವಿ ಮಾಡಿತು.

ಸುಮಾರು ವರ್ಷಗಳಿಂದ ನಮ್ಮ ರಾಜ್ಯದಲ್ಲಿ ಹಾಗೂ ದೇಶದಲ್ಲಿ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ಮ ಕೊಲೆ ಮಾಡುತ್ತಾ ಬಂದಿದ್ದಾರೆ. ಅದರಲ್ಲೂ ಹಿಂದುಳಿದ ವರ್ಗದ ಹೆಣ್ಣು ಮಕ್ಕಳನ್ನು ಪ್ರೀತಿ ಹೆಸರಿನಲ್ಲಿ ಮೊ ಮಾಡಿ ನಮ್ಮ ಮನೆಯಲ್ಲಿ ಜಾತಿ ಸಮಸ್ಯೆ ಎಂದು ಅವರನ್ನು ಉಪಯೋಗಿಸಿ ಬಿಟ್ಟು ಹೋಗಿರುತ್ತಾರೆ. ಮೊನ್ನ ಆ ರಾಜ್ಯದಲ್ಲಿ ಮೂರು ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ಮಾಡಿ ಕೊಲೆ ಮಾಡಲಾಗಿದೆ. ಹಾಗೂ ಮಣಿಪುರದ ಇಬ್ಬರು ಮಹಿಳೆಯರನ್ನು ಬೆತ್ತಲೆಗೊಳಿಸಿ ರಸ್ತೆಯಲ್ಲಿ ಮೆರವಣಿಗೆ ನಡೆಸಿ, ಲೈಂಗಿಕ ದೌರ್ಜನ್ಯ ಎಸಗಲಾಗಿದೆ. ಈ ವಿಚಾರವಾಗಿ ಈ ಘಟನೆಗಳ ವಿರುದ್ಧವಾಗಿ, ದ ಹಾಗೂ ರಾಜ್ಯದ ಹೆಣ್ಣು ಮಕ್ಕಳ ಮೇಲಿನ ಈ ದೌರ್ಜನ್ಯ ವಿರುದ್ಧವಾಗಿ, ಪ್ರತಿಭಟನಾ ಹೋರಾಟ ಮಾಡುವ ಮೂಲಕ ಈ ದೂರನ್ನು ನೀಡಿರುತ್ತೇವೆ ತಾವುಗಳು ನಮ್ಮ ದೂರನ್ನು ಗಂಭೀರವಾಗಿ ಪರಿಗಣಿಸಿ ಆರೋಪಿಗಳಿಗೆ ಶಿಕ್ಷೆಯಾಗುವ ಹಾಗೆ ಮತ್ತು ರಾಜ್ಯದ ಹಾಗೂ ದೇಶದ ಹೆಣ್ಣು ಮಕ್ಕಳಿಗೆ ಸಂರಕ್ಷಣೆ ನೀಡಲು ಸಾಧ್ಯವಾಗದಿರುವ ರಾಜಕಾರಣಿಗಳು ಸ್ವಯಂ ಪ್ರೇರಿತವಾಗಿ ರಾಜೀನಾಮೆ ನೀಡುವಂತೆ ಎಚ್ಚರ ನೀಡಬೇಕಾಗಿ, ರಾಜ್ಯಪಾಲರಲ್ಲಿ ಮನವಿ ಮಾಡಲಾಯಿತು.

ಮಣಿಪುರದಲ್ಲಿ ಕುಕಿ ಜೋ ಬುಡಕಟ್ಟು ಸಮುದಾಯದ ಮಹಿಳೆಯರನ್ನು ಸ ಂ ಪ ೂ ರ ್ ಣ ಬ ೆ ತ ್ ಲ ಗ ೊ ಳ ಿ ಸ ಿ ಸಾರ್ವಜನಿಕವಾಗಿ ಮೆರವಣಿಗೆ ಮಾಡಿ ಸಾಮೂಹಿಕ ಅತ್ಯಾಚಾರ ಮಾಡಿರುವ ದುಷ್ಕರ್ಮಿಗಳನ್ನು ತಕ್ಷಣವೇ ಗಲ್ಲುಶಿಕ್ಷೆಗೆ ಒಳಪಡಿಸಬೇಕು.ಸಂಘರ್ಷ ಮತ್ತು ಹಿಂಸಾಚಾರದಿಂದ ನಿಯಂತ್ರಿಸುವಲ್ಲಿ ಮಣಿಪುರದಲ್ಲಿ ಕಾನೂನು ವಿಫಲವಾಗಿರುವ ಬಿರೇನ್‌ಸಿಂಗ್ ನೇತೃತ್ವದ ಸರ್ಕಾರವನ್ನು ತಕ್ಷಣವೇ ವಜಾಗೊಳಿಸಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಬೇಕು 3 ತಿಂಗಳಿನಿಂದ ನಲುಗಿಹೋಗಿರುವ ಜನಾಂಗೀಯ ರಾಷ್ಟ್ರಪತಿಯವರ ಆಡಳಿತವನ್ನು ಜಾರಿಗೊಳಿಸಬೇಕು. ಕಾನೂನು ಮತ್ತ ಸುವ್ಯವಸ್ಥೆ ಕಾಪಾಡಲು ವಿಫಲವಾಗಿರುವ ಮಣಿಪುರದ ಮುಖ್ಯಮಂತ್ರಿ ಬಿರೇನ್ ಸಿಂಗ್ ಕೇಂದ್ರ ಗೃಹಮಂತ್ರಿ ಅಮಿತ್ ಷಾ ಮತ್ತು ಪ್ರಧಾನಿ ನರೇಂದ್ರಮೋದಿಯವರು ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಗಳಿಗೆ ರಾಜೀನಾಮೆ ಸಲ್ಲಿಸಬೇಕು ಎಂದು ಆಗ್ರಹಿಸಲಾಯಿತು.

ರಾಜಕೀಯ ಸಾಮಾಜಿಕ, ಮತ್ತು ಮಾನವ ಹಕ್ಕುಗಳಿಗೆ ಸಂಬಂಧಿಸಿದೆ ಗಂಭೀರ ಪ್ರಶ್ನೆಗಳು ಹುಟ್ಟಲು ಈಗಿನ ಪರಿಸ್ಥಿತಿ ಕಾರಣವಾಗಿದೆ. ಸುಪ್ರೀಮ್ ಕೋರ್ಟಿನ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡರವರು ಗಾಢ ಕಳವಳ ವ್ಯಕ್ತಪಡಿಸಿದ್ದಾರೆ ತಳಮಟ್ಟದಲ್ಲಿ ಏನನ್ನೂ ಮಾಡಲು ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ ಎಂದಾದರೆ ನ್ಯಾಯಾಲಯವು ಮಧ್ಯಪ್ರವೇಶ ಮಾಡಬೇಕಾಗುತ್ತದೆ. ಎನ್ನುವ ಎಚ್ಚರಿಕೆಯನ್ನು ನೀಡಿದ್ದಾರೆ. ಕಾನೂನಿನ ಆಡಳಿತಕ್ಕೆ ಒಳಪಟ್ಟ ಯಾವುದೇನಾಗರೀಕ ಸಮಾಜವು ಇಂತಹ ಹೀನ ಕೃತ್ಯ ಹೆಸಗಿದವರಮೇಲೆ ತಕ್ಷಣವೇ ಕಾನೂನು ಕ್ರಮ ಕೈಗೊಳ್ಳುತ್ತಿತ್ತು. ವಿಡಿಯೋ ಕಳೆದವಾರ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವವರೆಗೂ ಯಾವುದೇ ತನಿಖೆ ನಡೆದಿರಲಿಲ್ಲ. ಯಾರನ್ನೂ ಬಂಧಿಸಿರಲಿಲ್ಲ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ತಪ್ಪಿತಸ್ಥರ ವಿರುದ್ಧ ಯಾವುದೇ ಕಾನೂನು ಕ್ರಮ ಕೈಗೊಳ್ಳದಿರುವುದು ಅನುಮಾನಗಳಿಗೆ ಕಾರಣವಾಗಿದೆಯಲ್ಲದೇ ಕಾನೂನು ಮತ್ತು ಸುವ್ಯವಸ್ಥೆಸಂಪೂರ್ಣವಾಗಿಕುಸಿದುಬಿದ್ದಿದೆ ಎಂದು ದೂರಿದ್ದಾರೆ.ಈ ಪ್ರತಿಭಟನೆಯಲ್ಲಿ ಜಿಲ್ಲಾ ಸಂಚಾಲಕ ಕೆಂಗುಂಟೆ ಜಯ್ಯಪ್ಪ, ಸುಂದರಮೂರ್ತಿ ಕೆ.ಆರ್. ಹೊಳಲ್ಕೆರೆ ನವೀನ್ ಮದ್ದೇರುಶ್ರೀನಿವಾಸ್, ಬಂಡಿಹಟ್ಟಿ ಮಂಜುನಾಥ್ ಗುಂಡಿಮಡು ಮಸ್ತಲ್ ಮಣ್ಣ ಸೇರಿದಂತೆ ಇತರರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T